ಸಂಪುಟ : 10 ಸಂಚಿಕೆ: 125 ಪುಟ : 4+2 ಬೆಲೆ: 3.00 ಗುರುವಾರ ಜೂನ್ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 125 Pages : 4+2 Price : 3.00 Thursday June 19 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂ. 19ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 12, 28 ಕಾರ್ಕಳ, ಗಣಪತಿ ಗುಡಿ, ಅಗಸರ, ಟೋಪಿಯವರ ಲೈನ್, 3ನೇ ಕ್ರಾಸ್, ಜಾಧವ್, ಮಾಲಿ ಪಾಟೀಲ್‌ರ ಲೈನ್, ಮುಧೋಳ, ವಾರ್ಡ್ ನಂ. 30, 34, 35 ರಲ್ಲಿ ಮೂರಶಿಳ್ಳಿನ ವಕಾರ, ಹೂಗಾರ ಪ್ಲಾಟ್, 1ನೇ ಕ್ರಾಸ್, 2ನೇ ಕ್ರಾಸ್, 3ನೇ ಕ್ರಾಸ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 14, 13ರಲ್ಲಿ ಗೋಮ್ಸ್ ಬಿಲ್ಡಿಂಗ್, ವಕೀಲರ ಚಾಳ, ಹಣಗಿ ಜೀನ್, ಕುರಡಗಿ ಜನತಾ ಗೋಡೌನ್, ಹಾದಿಮನಿಯವರ ಲೈನ್, ಹೆಡ್ ಪೋಸ್ಟ್ ಆಫೀಸ್, ಘತ್ತೇಪೂರ, ಕಾರಂತ ಡಾ॥ ಸೋನಿಯಾರ, ವಿಜಯ ಶೆಟ್ಟರ್ ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 21, 23 ರಲ್ಲಿ ಮೇರವಾಡೆ, ಭೂಮಾ, ಗುಳಗುಂದಿ, ಚನ್ನಪ್ಪ ಹೊಸ ಲೈನ್, ಹಳೇ ಲೈನ್, ಸ್ಮಶಾನ ಗಟ್ಟಿ, ಕಮತರ ಪ್ಲಾಟ್, ಅಕ್ಕಿ ಪ್ಲಾಟ್, ಮುನವಳ್ಳಿ ಪ್ಲಾಟ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 22ರಲ್ಲಿ ಗಂಗಿಮಡಿ ದೊಡ್ಡಮಸೂತಿ, ಭಾಗಗಳು.

ಪ್ರಕಟಣೆ: ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಲಾಗಿದೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆ.ವ್ಹಿ ಬೆಳ್ಳಟ್ಟಿ ಮತ್ತು 110 ಕೆ.ವ್ಹಿ ಬಾಗೇವಾಡಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಜೂನ್ 20ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆ.ವ್ಹಿ. ಬನ್ನಿಕೊಪ್ಪ ವಿಂಡ್, 110 ಕೆ.ವ್ಹಿ. ಆದಿತ್ಯ ಬಿರ್ಲಾ ಸೋಲಾರ್, 11 ಕೆ.ವ್ಹಿ. ಜೆಜೆಜಿ ಸೋಲಾರ್, 33 ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33 ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸಲ್ಪಡುವ ಎಲ್ಲಾ ನಗರ, ಕೈಗಾರಿಕಾ, ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಜುಲೈ 12ರಂದು ರಾಷ್ಟ್ರೀಯ ಲೋಕ ಅದಾಲತ್: ಪತ್ರಿಕಾಗೋಷ್ಠಿಯಲ್ಲಿ ಪ್ರಾಧಿಕಾರದ ಅಧ್ಯಕ್ಷೆ ನಾಗವೇಣಿ ಮಾಹಿತಿ

# ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಜುಲೈ 12ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ನಾಗವೇಣಿ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಬುಧವಾರ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು ಮತ್ತು ರಾಜೀ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು. ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ. ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದರು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚ್‌ನಂತೆ ಒಟ್ಟು 15 ಬೆಂಚ್‌ಗಳನ್ನು ರಚಿಸಿದ್ದು, ಗದಗ ಜಿಲ್ಲೆಯಲ್ಲಿ ಒಟ್ಟು 20411 ವಿವಿಧ ಚಾಲ್ತಿ ಪ್ರಕರಣಗಳಿವೆ. ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 2280 ಪ್ರಕರಣಗಳನ್ನು ಗುರುತಿಸಿದ್ದು, ಇದರಲ್ಲಿ ಸಿವಿಲ್ ದಾವೆಗಳು ಅಂದರೆ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ಗುರುತಿಸಲಾಗಿದೆ ಎಂದರು.

ಪಕ್ಷಗಾರರು ನ್ಯಾಯಾಲಯ ಗಳಲ್ಲಿರುವ ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದಾಗಿದೆ. ಕಳೆದ ಮಾರ್ಚ್-2025ರಂದು ಜರುಗಿದ ಲೋಕ ಅದಾಲತ್‌ನಲ್ಲಿ 3749 ಚಾಲ್ತಿ ಪ್ರಕರಣಗಳನ್ನು ಹಾಗೂ 29199 ವ್ಯಾಜ್ಯಪೂರ್ವ ಪ್ರಕರಣಗಳನ್ನು ಸೇರಿ ಒಟ್ಟು 32948 ಪ್ರಕರಣಗಳ್ನು ರಾಜೀ ಮೂಲಕ ಇತ್ಯರ್ಥಪಡಿಸಿದೆ.

▸▸ 3ನೇ ಪುಟಕ್ಕೆ



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ನ್ಯಾಯಾಲಯಗಳಲ್ಲಿ ಉಭಯ ಪಕ್ಷಕಾರರು ರಾಜೀ ಮಾಡಿಕೊಳ್ಳಲು ಸೂಕ್ತ ಮಾರ್ಗದರ್ಶನ ಮಾಡಲಾಗುವುದು. ಇಬ್ಬರಿಗೂ ಒಪ್ಪಿಗೆಯಾಗುವಂತೆ ಪ್ರಕರಣ ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದ ತೀರ್ಮಾನವಾಗುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯದ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಇದೊಂದು ವಿಶೇಷ ಅವಕಾಶವಾಗಿದೆ ಎಂದರು.

### ಪುರಸಭೆಯ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ಅಭಿನಂದಿಸಿದ ಶಾಸಕ ಜಿ.ಎಸ್. ಪಾಟೀಲ

# ಜನ ಮೆಚ್ಚುವಂತೆ ಆಡಳಿತ ನಡೆಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಸಾಮಾಜಿಕ ನ್ಯಾಯ ಒದಗಿಸುವಲ್ಲಿ ಕಾಂಗ್ರೆಸ್ ಪಕ್ಷ ಮೊದಲ ಸ್ಥಾನದಲ್ಲಿದೆ ಎಂಬುದನ್ನು ನಾವೆಲ್ಲ ಅರಿಯಬೇಕಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ರೋಣ ಪುರಸಭೆಯ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಸನ್ಮಾನಿಸಿ ಮಾತನಾಡಿದರು.

ರೋಣ ಸೇರಿದಂತೆ ಮತಕ್ಷೇತ್ರಕ್ಕೆ ಒಳಪಡುವ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ನಡೆದ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಮೊದಲಿನಿಂದಲೂ ಸಾಮಾಜಿಕ ನ್ಯಾಯ ಒದಗಿಸುವ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡುತ್ತಾ ಬಂದಿದೆ. ಸಮಾಜದ ಎಲ್ಲ ವರ್ಗದ ಜನರಿಗೂ ಅಧಿಕಾರ ದೊರಕಿದೆ ಎಂದರು.

ಇದಕ್ಕೂ ಮೊದಲು ಪುರಸಭೆಯ ಸಭಾಂಗಣದಲ್ಲಿ ತಹಸೀಲ್ದಾರ ನಾಗರಾಜ ಕೆ ನೇತೃತ್ವದಲ್ಲಿ ಚುನಾವಣಾ ಪ್ರಕ್ರಿಯೆ ನಡೆಯಿತು. ಈ ಹಿಂದೆ ಅಧ್ಯಕ್ಷರಾಗಿದ್ದ ಗೀತಾ ಮಾಡಲಗೇರಿ, ಉಪಾಧ್ಯಕ್ಷರಾಗಿದ್ದ ದುರ್ಗಪ್ಪ ಹಿರೇಮನಿ ತಮ್ಮ ಸ್ಥಾನಗಳಿಗೆ ರಾಜಿನಾಮೆ ನೀಡಿದ ಪ್ರಯುಕ್ತ ಬುಧವಾರ ಎರಡೂ ಸ್ಥಾನಗಳಿಗೆ ಚುನಾವಣೆ ನಿಗದಿಯಾಗಿತ್ತು. ಪುರಸಭೆಯಲ್ಲಿ ಕಾಂಗ್ರೆಸ್ ಸ್ಪಷ್ಟ ಬಹುಮತ ಹೊಂದಿದ್ದರಿಂದ ವರಿಷ್ಠರ ಆದೇಶದಂತೆ ಅಧ್ಯಕ್ಷ ಸ್ಥಾನಕ್ಕೆ ಬಸಮ್ಮ ಕೊಪ್ಪದ, ಉಪಾಧ್ಯಕ್ಷ ಸ್ಥಾನಕ್ಕೆ ಹನ್ಮಂತಪ್ಪ ತಳ್ಳಕೇರಿ ನಾಮಪತ್ರಗಳನ್ನು ಸಲ್ಲಿಸಿದರು. ಇವರ ವಿರುದ್ಧ ಯಾವುದೇ ನಾಮಪತ್ರ ಸಲ್ಲಿಕೆಯಾಗದ್ದರಿಂದ ತಹಸೀಲ್ದಾರ ನಾಗರಾಜ ಕೆ ಇವರಿಬ್ಬರ ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಈ ಸಂದರ್ಭದಲ್ಲಿ ವಿ.ಆರ್. ಗುಡಿಸಾಗರ, ವೀರಣ್ಣ ಶೆಟ್ಟರ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಶಶಿಕಲಾ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಶಫೀಕ ಮೂಗನೂರ, ಸಂಗಪ್ಪ ಜಿಡ್ಡಿಬಾಗಿಲ, ಬಸವರಾಜ ಯರಗುಪ್ಪ, ಬಸವರಾಜ ಜಗ್ಗಲ, ಆನಂದ ಚಂಗಳಿ, ಗದಿಗೆಪ್ಪ ಕಿರೇಸೂರ, ನಾಜಬೇಗಂ ಯಲಿಗಾರ, ಗೀತಾ ಕೊಪ್ಪದ, ಲಕ್ಷ್ಮೀ ಗಡಗಿ ಸೇರಿದಂತೆ ಮುಖಂಡರು, ಸದಸ್ಯರು ಉಪಸ್ಥಿತರಿದ್ದರು.



ನೂತನವಾಗಿ ಅಧಿಕಾರ ಸ್ವೀಕರಿಸಿರುವ ಸದಸ್ಯರು ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸಬೇಕು. ಪಕ್ಷಬೇಧ ಮರೆತು ಎಲ್ಲಾ ವಾರ್ಡ್‌ಗಳ ಹಿತವನ್ನೇ ಬಯಸಿ ನಾಗರಿಕ ಸಮುದಾಯಕ್ಕೆ ನ್ಯಾಯ ಒದಗಿಸಬೇಕು. ಮುಖ್ಯವಾಗಿ ಸ್ವಚ್ಛತೆ, ಆರೋಗ್ಯದ ಬಗ್ಗೆ ಹೆಚ್ಚಿನ ಮುತುವರ್ಜಿ ವಹಿಸಬೇಕು.

ಸರ್ವ ಸದಸ್ಯರುಗಳ ವಿಶ್ವಾಸವನ್ನು ಪಡೆದು ತಮ್ಮ ಆಡಳಿತವನ್ನು ಜನರು ಮೆಚ್ಚುವ ರೀತಿಯಲ್ಲಿ ನಡೆಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಕಿವಿಮಾತು ಹೇಳಿದರು.

### ಸ್ಲಂ ಜನಾಂದೋಲನ ಕರ್ನಾಟಕ, ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ನಗರಸಭೆಯೆದುರು ಪ್ರತಿಭಟನೆ

# ಕೊಳಗೇರಿ ಪ್ರದೇಶಗಳನ್ನು ತೆರವುಗೊಳಿಸಿದರೆ ಉಗ್ರ ಹೋರಾಟ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದಲ್ಲಿ ಸುಮಾರು 48 ಗುಡಿಸಲು ಪ್ರದೇಶಗಳನ್ನು ಸ್ಲಂ ಕಾಯ್ದೆ 1973ರ ಪ್ರಕಾರ ಅಧಿಕೃತವಾಗಿ ಘೋಷಣೆ ಮಾಡಲಾಗಿದೆ. ಇನ್ನು ಸುಮಾರು 30ಕ್ಕೂ ಹೆಚ್ಚು ಗುಡಿಸಲು ಪ್ರದೇಶಗಳನ್ನು ಗುರುತಿಸಲಾಗಿದ್ದು, ಅಧಿಕೃತವಾಗಿ ಘೋಷಣೆ ಮಾಡಬೇಕಾಗಿದೆ. ಘೋಷಿತ ಮತ್ತು ಅಘೋಷಿತ ಸ್ಲಂ ಪ್ರದೇಶಗಳಲ್ಲಿ ವಸತಿ ಹಾಗೂ ನಾಗರೀಕ ಸೌಲಭ್ಯಗಳನ್ನು ಕಲ್ಪಿಸಬೇಕಾದ ಅಧಿಕಾರಿಗಳು ನಗರದ ಗೋಸಾವಿ ಸ್ಲಂ ಮತ್ತು ಕೆಲವುಂದು ಕೊಳಗೇರಿ ಪ್ರದೇಶಗಳನ್ನು ವಿನಾಕಾರಣ ತೆರವುಗೊಳಿಸುವ ಹುನ್ನಾರ ನಡೆಸುತ್ತಿರುವ ನಗರಸಭೆ ಪೌರಾಯುಕ್ತರ ಕ್ರಮವನ್ನು ಖಂಡಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ನಗರಸಭೆಯೆದುರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಗದಗ-ಬೆಟಗೇರಿ ನಗರದ ಅಘೋಷಿತ ಗುಡಿಸಲು ಪ್ರದೇಶಗಳ ಘೋಷಣೆಗಾಗಿ ನಗರಸಭೆಯಿಂದ ನಿರಪೇಕ್ಷಣಾ ಪತ್ರ ನೀಡಲು ಸ್ಲಂ ಬೋರ್ಡ್‌ನಿಂದ ಪತ್ರ ಕಳುಹಿಸಿ 3 ವರ್ಷ ಕಳೆದಿದ್ದರೂ ಅಧಿಕಾರಿಗಳು ಇದನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ. ನೈಜ್ ಗುಡಿಸಲು ಪ್ರದೇಶವನ್ನು ಗುರುತಿಸಿ ವಸತಿ ಯೋಜನೆ ಕಲ್ಪಿಸಬೇಕಾದ ನಮ್ಮ ಜನಪ್ರತಿಧಿಗಳು ಮತ್ತು ಅಧಿಕಾರಿಗಳು ವಸತಿ ಮನೆಗಳು ಹಂಚಿಕೆ ಮಾಡುವ ಸಂದರ್ಭದಲ್ಲಿ ಅಸಂಘಟಿತ ಕಾರ್ಮಿಕ ವಲಯದ ಕುಟುಂಬಗಳನ್ನು ಕಡೆಗಣಿಸಿರುವ ಕ್ರಮವನ್ನು ಖಂಡಿಸುತ್ತೇವೆ ಎಂದರು.

ಗದಗ ಜಿಲ್ಲಾ ▸▸ 3ನೇ ಪುಟಕ್ಕೆ

ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ ಮಾತನಾಡಿ, ನಮ್ಮ ದೇಶದ ಸಂವಿಧಾನದ ಪ್ರಕಾರ ದೇಶದಲ್ಲಿ ವಾಸಿಸುವ ಪ್ರತಿಯೊಬ್ಬ ನಾಗರಿಕನಿಗೆ ಬದುಕುವ ಹಕ್ಕು ಇದೆ. ಎಲ್ಲರಿಗೂ ನಮ್ಮ ದೇಶದ ನೆಲದಲ್ಲಿ ವಸತಿ ಮತ್ತು ಮೂಲಭೂತ ಸೌಲಭ್ಯಗಳನ್ನು ಸಮಾನವಾಗಿ ಪಡೆದುಕೊಳ್ಳುವ ಅಧಿಕಾರವಿದೆ. ಆದರೆ ಸ್ಥಳೀಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ನಮ್ಮ ದೇಶದ ಸಂವಿಧಾನದ ಆಶಯವನ್ನು ಗಾಳಿಗೆ ತೂರಿ ಬಡಜನರ ಮತ್ತು ಸ್ಲಂ ಜನರ ವಿರುದ್ಧವಾಗಿ ನಡೆದುಕೊಳ್ಳುತ್ತಿರುವುದು ಖಂಡನೀಯವಾಗಿದೆ ಎಂದರು.

### ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜೂ.21ಕ್ಕೆ ಕಾರ್ಯಕ್ರಮ

# ಅಂತಾರಾಷ್ಟ್ರೀಯ ಯೋಗ ದಿನಾಚರಣೆ


■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರ, ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನಗರಸಭೆ ಗದಗ-ಬೆಟಗೇರಿ ಇವರುಗಳ ಸಂಯುಕ್ತ ಆಶ್ರಯದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ-2025 ಉದ್ಘಾಟನಾ ಸಮಾರಂಭ ಜರುಗಲಿದೆ.

ಜೂನ್ 19ರ ಬೆಳಿಗ್ಗೆ 9 ಗಂಟೆಗೆ ಸಾಮೂಹಿಕ ಯೋಗ ನಡಿಗೆ ಮುನ್ಸಿಪಲ್ ಆವರಣದಿಂದ ಪ್ರಾರಂಭಗೊಳ್ಳುವುದು. ಜೂನ್ 21ರ ಬೆಳಿಗ್ಗೆ 6.30 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ-2025 ಉದ್ಘಾಟನಾ ಸಮಾರಂಭ ಜರುಗುವುದು. ಘನ ಉಪಸ್ಥಿತಿಯನ್ನು ಸಭಾಪತಿ ಬಸವರಾಜ ಹೊರಟ್ಟಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ ಗುಂಡೂರಾವ್ ವಹಿಸುವರು. ಉದ್ಘಾಟನೆಯನ್ನು ಕಾನೂನು, ಮಾನವ ಹಕ್ಕುಗಳು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾಲಿ ಸಂಸದ ಬಸವರಾಜ ಬೊಮ್ಮಾಯಿ, ರಾಜ್ಯ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿ.ಪ ಸದಸ್ಯ ಸಲೀಂ ಅಹ್ಮದ, ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ, ಬಾಗಲಕೋಟ ಸಂಸದ ಪಿ.ಸಿ. ಗದ್ದಿಗೌಡರ, ವಿ.ಪ ಸದಸ್ಯರಾದ ಎಸ್.ವ್ಹಿ. ಸಂಕನೂರ, ಪ್ರದೀಪ ಶೆಟ್ಟರ್, ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಉಪಸ್ಥಿತರಿರುವರು.

ಈ ಕಾರ್ಯಕ್ರಮದಲ್ಲಿ ಗದಗ ಜಿಲ್ಲಾಧಿಕಾರಿಗಳಾದ ಸಿ.ಎನ್. ಶ್ರೀಧರ, ಗದಗ ಜಿ.ಪಂ ಮುಖ್ಯ ಕಾರ್ಯದರ್ಶಿ ಭರತ್ ಎಸ್, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಉಪಸ್ಥಿತರಿರುವರು. ಗದಗ ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲಸಿಂಗ ಪಿ.ಸಮೋರೇಕರ ಪತ್ರಿಕಾ ಪ್ರಕಟಣೆಯ ಮೂಲಕ ಸರ್ವರಿಗೂ ಸ್ವಾಗತ ಕೋರಿದ್ದಾರೆ.



ವಿಶೇಷ ಆಹ್ವಾನಿತರಾಗಿ ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಆಯುಷ್ ನಿರ್ದೇಶನಾಲಯದ ಆಯುಕ್ತರಾದ ವಿಪಿನ್ ಸಿಂಗ್ ಭಾಗವಹಿಸುವರು.

## ಸಂಪಾದಕೀಯ

# ಗುಣಮಟ್ಟದ ಶಿಕ್ಷಣಕ್ಕೆ ಬೇಕು ಸರಕಾರದ ಸ್ಪಷ್ಟ ನಿರ್ಧಾರ

ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಶೇ. 60ಕ್ಕಿಂತ ಕಡಿಮೆ ಸಾಧನೆ ಮಾಡಿದ ಅನುದಾನಿತ ಶಾಲೆಗಳ ಅನುದಾನ ಕಡಿತಗೊಳಿಸುವ ಶಿಕ್ಷಣ ಇಲಾಖೆಯ ಚಿಂತನೆಯು ಗುಣಮಟ್ಟದ ಶಿಕ್ಷಣದ ಕಡೆಗೆ ಸರ್ಕಾರ ಇಟ್ಟಿರುವ ಮಹತ್ವದ ಹೆಜ್ಜೆಯಾಗಿದೆ.

ಕಳೆದ ಮೂರು ವರ್ಷಗಳಿಂದ ಕಡಿಮೆ ಫಲಿತಾಂಶ ದಾಖಲಿಸಿದ ಶಾಲೆಗಳ ಅನುದಾನ ಕಡಿತ, ಶಿಕ್ಷಕರ ಬಡ್ತಿ ತಡೆಹಿಡಿಯುವುದು, ನೋಟಿಸ್ ನೀಡುವುದು, ಹಾಗೂ ಅರ್ಹತಾ ಮೌಲ್ಯಮಾಪನಗಳಂತಹ ಕಠಿಣ ಕ್ರಮಗಳ ಕುರಿತ ಚರ್ಚೆಗಳು ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತರದಾಯಿತ್ವವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸ್ವಾಗತಾರ್ಹವಾಗಿವೆ.

ಆದರೆ, ಈ ಪ್ರಸ್ತಾವನೆಯು ಕೆಲವು ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ. ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಅನೇಕ ಅನುದಾನಿತ ಶಾಲೆಗಳೂ ರಾಜ್ಯದಲ್ಲಿವೆ. ಅವುಗಳನ್ನು ಗುರುತಿಸಿ, ಪ್ರೋತ್ಸಾಹಿಸಲು ಅಥವಾ ಹೆಚ್ಚಿನ ಅನುದಾನ ನೀಡುವ ಕುರಿತು ಯಾವುದೇ ಸ್ಪಷ್ಟತೆಯಿಲ್ಲ. ಉತ್ತಮ ಸಾಧನೆ ಮಾಡಿದ ಶಾಲೆಗಳಿಗೆ ಮಾನ್ಯತೆ ಮತ್ತು ಪ್ರೋತ್ಸಾಹ ನೀಡುವುದು ಕೇವಲ ಉತ್ತಮ ಫಲಿತಾಂಶಕ್ಕೆ ಮಾತ್ರವಲ್ಲದೆ, ಸಮಗ್ರ ಶೈಕ್ಷಣಿಕ ವಾತಾವರಣವನ್ನು ಸುಧಾರಿಸಲು ಪ್ರೇರಕಶಕ್ತಿಯಾಗಬಲ್ಲದು. ದಂಡನೆಗಿಂತ ಉತ್ತೇಜನವು ಕೆಲವೊಮ್ಮೆ ಹೆಚ್ಚು ಪರಿಣಾಮಕಾರಿಯಾಗಿರುತ್ತದೆ.

ಇನ್ನು, ಅನುದಾನಿತ ಶಾಲೆಗಳತ್ತ ಮಾತ್ರ ಗಮನ ಹರಿಸುವುದು ಸರಿಯಲ್ಲ.

ಕಡಿಮೆ ಫಲಿತಾಂಶ ದಾಖಲಿಸಿದ ಅನೇಕ ಸರ್ಕಾರಿ ಶಾಲೆಗಳೂ ಇವೆ. ಸರ್ಕಾರಿ ಶಾಲೆಗಳಲ್ಲಿನ ಫಲಿತಾಂಶ ಸುಧಾರಣೆಗೆ ಇದೇ ಮಾದರಿಯ ಕ್ರಮಗಳನ್ನು ಅಳವಡಿಸಬೇಕು. ಸರ್ಕಾರಿ ಶಾಲಾ ಶಿಕ್ಷಕರ ವೇತನ ಕಡಿತ ಅಥವಾ ಕಾರ್ಯಕ್ಷಮತೆ ಆಧಾರಿತ ಮೌಲ್ಯಮಾಪನ ಅಳವಡಿಕೆಯು ಅವರಲ್ಲಿ ಹೆಚ್ಚು ಬದ್ಧತೆಯನ್ನು ಮೂಡಿಸಿ, ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಲು ಪ್ರೇರಣೆ ನೀಡಬಹುದು.

ಶಿಕ್ಷಣ ಇಲಾಖೆಯ ಈ ಚಿಂತನೆ ಶೈಕ್ಷಣಿಕ ಸುಧಾರಣೆಗೆ ಪೂರಕವಾಗಿದೆ. ಆದರೆ, ಕೇವಲ ಕಡಿಮೆ ಫಲಿತಾಂಶಕ್ಕಾಗಿ ಅನುದಾನ ಕಡಿತಗೊಳಿಸುವ ಬದಲಿಗೆ, ಸಮಗ್ರ ನೀತಿಯನ್ನು ರೂಪಿಸುವುದು ಅಗತ್ಯ. ಉತ್ತಮ ಸಾಧನೆ ಮಾಡಿದ ಶಾಲೆಗಳಿಗೆ ಪ್ರೋತ್ಸಾಹ, ಕಳಪೆ ಸಾಧನೆಗೆ ಉತ್ತರದಾಯಿತ್ವ, ಮತ್ತು ಸರ್ಕಾರಿ ಶಾಲೆಗಳನ್ನೂ ಒಳಗೊಂಡಂತೆ ಸಮಗ್ರ ಶೈಕ್ಷಣಿಕ ವ್ಯವಸ್ಥೆಯ ಸುಧಾರಣೆಗೆ ನಿಖರ ಕಾರ್ಯತಂತ್ರಗಳು ರೂಪುಗೊಂಡರೆ ಮಾತ್ರ ಗುಣಮಟ್ಟದ ಶಿಕ್ಷಣದ ಕನಸು ನನಸಾಗಬಹುದು.

## ಜೂನ್ 21, ಅಂತಾರಾಷ್ಟ್ರಿಯ ಯೋಗ ದಿನದ ನಿಮಿತ್ತ ವಿಶೇಷ ಲೇಖನ

# ಯೋಗದಿಂದ ಆರೋಗ್ಯ ಭಾಗ್ಯ



ಸಂಯುಕ್ತ ರಾಷ್ಟ್ರಗಳ ಒಕ್ಕೂಟದಿಂದ 11.12.2014ರಂದು ನಡೆದ ಸಾಮಾನ್ಯ ಸಭೆಯಲ್ಲಿ ಅಂತಾರಾಷ್ಟ್ರಿಯ ಯೋಗ ದಿನವನ್ನಾಗಿ ಜೂನ್ 21ರಂದು ಆಚರಿಸಬೇಕೆಂದು ತೀರ್ಮಾನಿಸಲಾಯಿತು. ಪ್ರಸಕ್ತ ವರ್ಷ 11ನೇ ವರ್ಷದ ಆಚರಣೆಯಾಗಿದ್ದು, ಇದರಲ್ಲಿ ಭಾರತದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಪಾತ್ರ ಮುಖ್ಯವಾಗಿದೆ. ಈ ಬಾರಿ ಅವರು ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಭಾಗವಹಿಸುವರು. ಭಾರತ ತಪೋಭೂಮಿ, ಯೋಗಿಗಳ ತಾಣ, ಆಧ್ಯಾತ್ಮದಲ್ಲಿ ವಿಶ್ವದ ದಾರಿ ದೀಪವೆಂದು ಪ್ರಸಿದ್ಧವಾಗಿದೆ.

'ಯೋಗ' ಎನ್ನುವ ಪದ ಸಂಸ್ಕೃತದ ಪದವಾದ ಯುಜ್ ಧಾತುವುನಿಂದ ಹುಟ್ಟಿದೆ. ಯುಜ್ ಎಂದರೆ ಜೋಡಿಸು, ಕೂಡಿಸು, ಸಂಬಂಧಿಸು. ಇದರರ್ಥ 'ಸಂಬಂಧ' ಅಥವಾ ಒಕ್ಕೂಟವಾಗಿದೆ. ಪತಂಜಲಿ ಮಹರ್ಷಿಗಳ ಪ್ರಕಾರ, 'ಯೋಗಃ ಚಿತ್ತವೃತ್ತಿ ನಿರೋಧಃ' ಯೋಗವೆಂದರೆ ಚಿತ್ತದ ಚಾಂಚಲ್ಯ ವೃತ್ತಿಗಳನ್ನು ನಿರೋಧಿಸುವುದು. ವಸಿಷ್ಠ ಮಹರ್ಷಿಗಳು 'ಮನ ಪ್ರಶಮನೋಪಾಯಃ ಯೋಗಃ ಇತಿ ಅಬಿಧೀಯತೆ' ಮನಸ್ಸನ್ನು ಪ್ರಶಾಂತಗೊಳಿಸುವ ಸುಂದರ ಉಪಾಯವೇ ಯೋಗವೆಂದು ಹೆಳುತ್ತಾರೆ.

ಯೋಗವೆಂದರೆ ಕೆಲವರು ವರ್ಣಿಸುವಂತೆ ಪ್ರಾಣಾಯಾಮ, ಶೀರ್ಷಾಸನ, ಸರ್ವಾಂಗಾಸನ ಇತ್ಯಾದಿ ಯಾವದೇ ತರಹದ ಅಂಗಸಾಧನೆ ಅರ್ಥಾತ್ ಶರೀರ ಸಾಧನೆಯಾಗಿರದೆ, ಯೋಗವು ಆತ್ಮನ ಚಂಚಲ ಮನಸ್ಸನ್ನು ಏಕಾಗ್ರಗೊಳಿಸಬಲ್ಲ ಮನೋವ್ಯಾಯಾಮವಾಗಿದೆ. ಅದೇನೇ ಇರಲಿ, ಯೋಗ ಎಂದರೆ ಸರ್ವ ಮನೋವ್ಯಾಪಾರಗಳ ಮೇಲೆ ಪ್ರಭುತ್ವವನ್ನು ಸ್ಥಾಪಿಸುವುದು.

ವರ್ತಮಾನ ಸಮಯದಲ್ಲಿ ಯೋಗದಲ್ಲಿ ಹಠಯೋಗ, ಸನ್ಯಾಸಯೋಗ, ಭಕ್ತಿಯೋಗ, ಕರ್ಮಯೋಗ, ಜ್ಞಾನಯೋಗ, ರಾಜಯೋಗ, ಶುಭಯೋಗ, ಲಾಭಯೋಗ, ಯೋಗಾ-ಯೋಗ ಮುಂತಾದ ಅನೇಕ ಪ್ರಕಾರಗಳು ಇವೆ. ಎಲ್ಲ ವಿಜ್ಞಾನಗಳಿಗಿಂತ ವೈಪರಿತ್ಯವಾಗಿ ಇನ್ನೊಂದು ವಿಜ್ಞಾನವಿದೆ, ಅದು ಯೋಗವಿಜ್ಞಾನ.

ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಇದನ್ನು ಪ್ರಾಯೋಗಿಕವಾಗಿ ಕಲಿಸಲಾಗುತ್ತದೆ. ಈ ಸಂಸ್ಥೆಯಲ್ಲಿ ರಾಜಯೋಗ ಶಿಕ್ಷಣ ಮತ್ತು ಸಂಶೋಧನೆ ಪ್ರತಿಷ್ಠಾನ ಎಂಬ ಅಂಗಸಂಸ್ಥೆ ಕಾರ್ಯಗತವಾಗಿದೆ. ಇಲ್ಲಿ ಧರ್ಮ, ಜಾತಿ, ಮತ, ವಯಸ್ಸು, ವರ್ಣ ಭೇದವಿಲ್ಲದೆ ಸರ್ವರಿಗೂ ಯೋಗ ಶಿಕ್ಷಣವನ್ನು ಉಚಿತವಾಗಿ ಕಲಿಸಲಾಗುತ್ತದೆ. ಈ ಯೋಗವಿಜ್ಞಾನವು ಮನಸ್ಸು, ಬುದ್ಧಿ, ಸಂಸ್ಕಾರ, ಸ್ವಭಾವ, ವ್ಯವಹಾರ ಚಾರಿತ್ರ್ಯ ಇತ್ಯಾದಿಗಳಿಗೆ ಸಂಬಂಧಿಸಿದೆ. ಇಲ್ಲಿ ಆತ್ಮ ಮತ್ತು ಪರಮಾತ್ಮನ ನಡುವೆ ಸರ್ವಪ್ರಕಾರದ ಸಂಬಂಧವು ಹೇಗೆ ಜೋಡಿಸಬೇಕು ಎಂಬುದನ್ನು ತಿಳಿಸಲಾಗುತ್ತದೆ.

ಈ ಸಂಬಂಧಗಳಲ್ಲಿ ತಂದೆ, ಶಿಕ್ಷಕ, ಗುರುವಿನ ಸಂಬಂಧ ಅತಿ ಮುಖ್ಯ. ಅತ್ಮನಾಗಿ ಪರಮಾತ್ಮನ ಜೊತೆ ಮನನ, ಚಿಂತನೆ, ಮಿಲನ ಮಾಡಿದಾಗ ಯೋಗಿಯು ಮಗ್ನ ಅವಸ್ಥೆಗೆ ತಲುಪುತ್ತಾನೆ. ಸ್ವಯಂ ಪರಮಾತ್ಮನೇ ಕಲಿಸುವ ರಾಜಯೋಗವು ಅತ್ಯಂತ ಸರಳ ಹಾಗೂ ಸಹಜವಾಗಿದೆ. ಇದರಲ್ಲಿ ಮಾನವನ ಪ್ರವೃತ್ತಿಗಳ ಮಾರ್ಗಾಂತರೀಕರಣ ಹಾಗೂ ಶುದ್ಧೀಕರಣ ಮಾಡಿ ಅವನ ವ್ಯವಹಾರ ಮತ್ತು ಆಚಾರ ಸುಧಾರಿಸಿ ಅವನ ಸಂಸ್ಕಾರಗಳನ್ನು ಸತೋಪ್ರಧಾನ ಮಾಡಿ ಅವನನ್ನು ದೇವತಾ ಸಮಾನ ಮಾಡುತ್ತದೆ. ಯೋಗರೂಪಿ ಈ ವಿಜ್ಞಾನ ಮನುಷ್ಯನ ಆವೇಗಗಳನ್ನು ನಿಯಂತ್ರಣ ಮಾಡುತ್ತದೆ ಮತ್ತು ಅವನ ವಿಚಾರಗಳನ್ನು ವ್ಯವಸ್ಥಿತ ಹಾಗೂ ಸುರಳಿತಗೊಳಿಸುತ್ತದೆ.

ಈ ವಿಜ್ಞಾನದಿಂದ ವ್ಯಕ್ತಿಯ ಮಾನಸಿಕ ಏಕಾಗ್ರತೆ ಶಕ್ತಿಯು ಹೆಚ್ಚುತ್ತದೆ ಮತ್ತು ಅವನಿಗೆ ಒಂದು ತರಹದ ಶಾಶ್ವತ ಶಾಂತತೆಯ ಅನುಭವ ಆಗುತ್ತಿರುತ್ತದೆ. ಅಲ್ಲದೆ ಪರಮಾತ್ಮನ ದಿವ್ಯಗುಣಗಳಾದ ಶಾಂತಿ, ಪವಿತ್ರತೆ, ಆನಂದ, ದಯಾ, ಸುಖ, ಪ್ರೇಮ, ಮುಂತಾದವುಗಳ ಅನುಭವ ಮಾಡಿಸುತ್ತದೆ. ಅವನ ವ್ಯವಹಾರದಲ್ಲಿ ಪರಿವರ್ತನೆ ಬಂದ ಕಾರಣ ಅನ್ಯರ ಜೊತೆಯಲ್ಲಿ ಅವನ ಮನಸ್ತಾಪ, ದ್ವೇಷ, ಈರ್ಷೆ, ಕ್ರೋಧ ಉತ್ಪನ್ನಗೊಳ್ಳುವುದಿಲ್ಲ. ಅವನ ಮನದಲ್ಲಿ ಆವೇಗಗಳ ಜ್ವಾಲಾಮುಖಿ ಏಳುವುದಿಲ್ಲ. ಮಾನಸಿಕ ಚಿಂತೆ ಇರುವುದಿಲ್ಲ. ಆದರೆ ಏಕರಸ ಅವಸ್ಥೆ ಅಥವಾ ಆನಂದದ ಅವಸ್ಥೆಯಲ್ಲಿ ಸ್ಥಿತನಾಗಿರುತ್ತಾನೆ.

ಯೋಗಾವಸ್ಥೆಯಲ್ಲಿ ಶ್ವಾಸೋಚ್ಛ್ವಾಸ ನಿಧಾನವಾಗಿ ನಡೆಯುವುದರಿಂದ ಯೋಗಿಯು ವಿಶ್ರಾಂತಿ ಹಾಗೂ ನೆಮ್ಮದಿ ಅನುಭವ ಪಡೆಯುವನು. ಯೋಗಾವಸ್ಥೆಯಲ್ಲಿ ಹೃದಯದಲ್ಲಿ ರಕ್ತ ಹೊಮ್ಮುವಿಕೆ ನಿಯಮಿತವಾಗಿ, ನಿರ್ದಿಷ್ಟವಾಗಿ ಕಡಿಮೆಯಾಗುವುದರಿಂದ ಹೃದಯಕ್ಕೆ ಸಾಕಷ್ಟು ವಿಶ್ರಾಂತಿ ದೊರೆಯುತ್ತದೆ.

ಯೋಗಾವಸ್ಥೆಯಲ್ಲಿ ಯೋಗಿಯ ಶರೀರದಲ್ಲಿ ಸಂಚರಿಸುವ ರಕ್ತದಲ್ಲಿ ಲ್ಯಾಕ್ಟಿಕ್ ಆಮ್ಲದ ಅಂಶವು ಶೀಘ್ರವಾಗಿ ಕೆಳಮಟ್ಟಕ್ಕೆ ಬರುವುದರಿಂದ ಸಂಪೂರ್ಣ ಶಾಂತಿಯ ಅನುಭವವಾಗುವುದಲ್ಲದೆ ಎಲ್ಲಾ ಪ್ರಕಾರದ ಉದ್ವೇಗ ಹಾಗೂ ನಿರುತ್ಸಾಹದಿಂದ ಮುಕ್ತಿ ಲಭಿಸಿ ನರಮಂಡಲಕ್ಕೆ ಶಕ್ತಿ ದೊರೆಯುವದಲ್ಲದೆ ಯಾವುದೇ ತರಹದ ನರಮಂಡಲ ಸಂಬಂಧಿತ ರೋಗ ನಿವಾರಣೆಯಾಗುತ್ತದೆ. ಯೋಗಾವಸ್ಥೆಯಲ್ಲಿ ಮಾನಸಿಕ ಉದ್ವೇಗ ದೂರವಾಗುವುದರಿಂದ ಮಾನವನ ತ್ವಚೆಯಲ್ಲಿ ಅಸಾಧಾರಣ ರೋಗ ನಿರೋಧಕ ಶಕ್ತಿಯು ಪ್ರಫುಲ್ಲಿತವಾಗುವುದರಿಂದ ಯೋಗಿಯು ಉಲ್ಲಾಸಭರಿತನಾಗುವನು.

ಹೃದಯವಿಕಾರ, ರಕ್ತದೊತ್ತಡ, ಮಾನಸಿಕ ಅಶಾಂತಿ, ಅರೆಹುಚ್ಚು, ಕ್ರೋಧ, ಕಾಮ, ಮಾನಸಿಕ ಭಯ ಸಹ ಯೋಗದಿಂದ ಓಡಿಹೋಗುತ್ತವೆ. ವಿಶ್ವ ಆರೋಗ್ಯ ಸಂಸ್ಥೆಯು 'ಸಂಪೂರ್ಣ ಶಾರೀರಿಕ, ಮಾನಸಿಕ, ಸಾಮಾಜಿಕ, ಆರೋಗ್ಯವೇ ಆರೋಗ್ಯವೆಂದೂ ಸಾರಿದೆ. ಕೇವಲ ರೋಗಗಳಿಲ್ಲದಿರುವಿಕೆ ಪರಿಪೂರ್ಣ ಆರೋಗ್ಯವಲ್ಲ ಎಂದು ವ್ಯಾಖ್ಯಾನಿಸಿದೆ. ಯೋಗದಿಂದ ಆರೋಗ್ಯ ಭಾಗ್ಯ ಪಡೆಯುವುದು ಸಹಜವಾಗಿದೆ. ಬ್ರಹ್ಮಾಕುಮಾರಿ ಸಂಸ್ಥೆಯು ಈ ವರ್ಷದಧ್ಯೆಯ ವಾಕ್ಯ 'ಸ್ವಚ್ಛ ಮತ್ತು ಆರೋಗ್ಯಕರ ಸಮಾಜಕ್ಕಾಗಿ ಆಧ್ಯಾತ್ಮಿಕ ಸಶಕ್ತೀಕರಣ' ಎಂದಾಗಿದೆ.

**– ವಿಶ್ವಾಸ ಸೋಹೋನಿ.**
ಬ್ರಹ್ಮಾಕುಮಾರಿಸ್ ಮೀಡಿಯಾ ವಿಂಗ್ಸ್.

# ಮೌನೇಶ್ವರರ ಕುರುಹುಗಳು ಈಗಲೂ ಇವೆ

**■ವಿಜಯಸಾಕ್ಷಿ ಸುದ್ದಿ, ನರಗುಂದ**



ಸಾಧು-ಸಂತರನ್ನು, ಮಹಿಮಾ ಪುರುಷರನ್ನು ಜಾತಿಗೆ ಸೀಮಿತ ಮಾಡಬಾರದು. ಬಸವಣ್ಣ, ಅಕ್ಕ ಮಹಾದೇವಿ, ಅಲ್ಲಮ ಪ್ರಭು ಸೇರಿದಂತೆ ಅನೇಕ ಮಹಾತ್ಮರು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸುವ ಮೂಲಕ ಆದರ್ಶವಾಗಿದ್ದಾರೆ. ಹಿಂದೂ-ಮುಸ್ಲಿಮರ ಭಾವೈಕ್ಯತೆಯನ್ನು ಸಾರುವ ಕ್ಷೇತ್ರವೆಂದರೆ ಅದು ತಿಂಥನಿ ಮೌನೇಶ್ವರರದ್ದಾಗಿದ್ದು, ಈಗಲೂ ಸಹ ಮೌನೇಶ್ವರರ ಕುರುಹುಗಳು ಅಲ್ಲಿವೆ ಎಂದು ಅಭಿನವ ಯಚ್ಚರಸ್ವಾಮಿಗಳು ನುಡಿದರು.

ತಾಲೂಕಿನ ಶಿರೋಳದ ಜಗದ್ಗುರು ಶ್ರೀ ಯಚ್ಚರಸ್ವಾಮಿ ಗವಿಮಠದಲ್ಲಿ ಜಗದ್ಗುರು ಮೌನೇಶ್ವರರ 189ನೇ ಆರಾಧನಾ ಮಹೋತ್ಸವದ 8ನೇ ದಿನದ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಶ್ರೀಗಳು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಮೌನೇಶ ಅಕ್ಕಸಾಲಿಗ, ತೆರಿಗೆ ಸಲಹೆಗಾರ ಮಂಜುನಾಥ ವಿ.ಕುಲಕರ್ಣಿ ನರಗುಂದ. ಬಿಜೆಪಿ ಮುಖಂಡ ಬಸವರಾಜ್ ಕುರಿ, ಶಿರೋಳ ಗ್ರಾಮದ ಯುವ ವಕೀಲರಾದ ಪ್ರವೀಣ ಸಂಗಳದಶೆಟ್ಟರ, ಮುಂಡರಗಿಯ ಸದ್ಭಕ್ತರು, ಪ್ರವಚನಕಾರರಾದ ದೊಡ್ಡಸಿದ್ದಪ್ಪ ಪತ್ತಾರ, ವೀರಭದ್ರಪ್ಪ ಕಮ್ಮಾರ, ಸಂಗೀತಗಾರರಾಗಿ ಮಲ್ಲಪ್ಪ ಚಿಕ್ಕನರಗುಂದ, ಹಾರ್ಮೋನಿಯಂ-ಈರಣ್ಣ ದಿಂಡಿ, ತಬಲಾ-ಮೈಲಾರಿ ಹೂಗಾರ ಪಾಲ್ಗೊಂಡಿದ್ದರು.

ಕಾರ್ಯಕ್ರಮವನ್ನು ಬಾಪುಗೌಡ ತಿಮ್ಮನಗೌಡ್ರ ನಿರೂಪಿಸಿದರು. ಶರಣಪ್ಪ ಮುಲ್ಕಿಪಾಟಿಲ, ಶ್ರೀಕಾಂತ್ ದೊಡ್ಡಮನಿ, ಮಲ್ಲಪ್ಪ ಪೂಜಾರ, ರವಿ ಮದಿಹಾಳ, ಮುತ್ತಪ್ಪ ಗುರುನಾಥ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ನಿತ್ಯ ಒಂದು ತಾಸು ನಮಗಾಗಿ, ನಮ್ಮ ಆರೋಗ್ಯಕ್ಕಾಗಿ ಯೋಗ ಮಾಡಿ

# ಸಕಲ ಆರೋಗ್ಯ ಸಂಪತ್ತಿಗಾಗಿ ಯೋಗ

**ಉಂಡು ನೂರಡಿ ಇಟ್ಟು! ಕೆಂಡಕ್ಕೆ ಕೈಕಾಸಿ ಗಂಡುಭುಜ ಮೇಲ್ಮಾಡಿ ಮಲಗಲು ವೈದ್ಯನ ಮಿಂಡನಂತಕ್ಕು ಸರ್ವಜ್ಞ.**



ಯೋಗವೆಂದರೆ ಮಾನಸಿಕ ಚಂಚಲತೆಯ ಮೇಲೆ ನಿರ್ಬಂಧ ಹೇರುವುದು. ಯೋಗವೆಂದರೆ ದೇಹ, ಮನಸ್ಸು ಮತ್ತು ಆತ್ಮಗಳನ್ನು ಒಂದುಗೂಡಿಸುವ ಒಂದು ಅಭ್ಯಾಸ. ಹಿಂದಿನ ಕಾಲದಲ್ಲಿ ನಮ್ಮ ಪ್ರಾಚೀನ ಆಹಾರ ಪದ್ಧತಿಯೇ ಔಷಧಿಯಾಗಿತ್ತು. ಇಂದು ಔಷಧಿಗಳೇ ಆಹಾರವಾಗಿವೆ. ಆಧುನಿಕ ಯುಗದಲ್ಲಿ ಮಾನವನು ಆಹಾರ ಮತ್ತು ಆರೋಗ್ಯದ ಬಗ್ಗೆ ತುಂಬಾ ನಿರ್ಲಕ್ಷ್ಯ ವಹಿಸುತ್ತಿದ್ದಾನೆ. ಅಂದು ದೈಹಿಕ ಶ್ರಮ ಹೆಚ್ಚಾಗಿದ್ದು, ಉತ್ತಮ ಆಹಾರ ಪದ್ಧತಿಯಿತ್ತು. ಇಂದು ಒತ್ತಡದ ಜೀವನ, ಆಹಾರ ಶೈಲಿ, ದೈಹಿಕ ದಣಿವಿಲ್ಲದಿರುವುದರಿಂದ ಅನೇಕ ರೋಗಗಳು ಉಲ್ಬಣಿಸಿವೆ.

ವಜ್ರಾಸನ, ಮಂಡೂಕಾಸನ, ಶಶಾಂಕಾಸನ, ಗೋಮುಖಾಸನ, ವಕ್ರಾಸನ, ವೀರಭದ್ರಾಸನ, ಪಶ್ಚಿಮೋತ್ತಾಸನ, ತ್ರಿಕೋನಾಸನ, ಧನುರಾಸನ, ವೃಕ್ಷಾಸನ, ಭುಜಂಗಾಸನ, ತಾಡಾಸನ, ಪಾದಹಸ್ತಾಸನ, ಅರ್ಧ ಚಕ್ರಾಸನ, ಪವನ ಮುಕ್ತಾಸನ, ಶವಾಸನಗಳನ್ನು ಮಾಡಿದರೆ ದೇಹ ಸುಸ್ಥಿತಿಯಲ್ಲಿದ್ದು, ಸದೃಢವಾದ ಮತ್ತು ಸುಂದರ ಆಕರ್ಷಕ ದೇಹದ ಆಕೃತಿಯನ್ನು ಪಡೆಯುತ್ತೇವೆ.

ಭಸ್ತ್ರಿಕಾ, ಕಪಾಲಭಾತಿ, ಬಾಹ್ಯ ಪ್ರಾಣಾಯಾಮ, ಉಜ್ಜಾಯಿ, ಅನುಲೋಮ-ವಿಲೋಮ, ಪ್ರಾಣಾಯಾಮಗಳನ್ನು ಮಾಡುವುದರಿಂದ ಮಾನಸಿಕ ಮತ್ತು ದೈಹಿಕ ಆರೋಗ್ಯ, ಒತ್ತಡ ನಿವಾರಣೆ, ರಕ್ತದೊತ್ತಡ ಕಡಿಮೆಯಾಗಿ, ಆತಂಕ ದೂರವಾಗಿ, ಮಧುಮೇಹ, ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಆಯುಷ್ಯ ವೃದ್ಧಿಯಾಗಿ, ಕಫ, ವಾತ, ಪಿತ್ತದಂತ ತ್ರಿದೋಷಗಳು ನಿವಾರಣೆಯಾಗುತ್ತವೆ. ನೆಗಡಿ, ಬೊಜ್ಜು ಕರಗುವಿಕೆ, ಕೀಲು ನೋವಿನಿಂದ ಮುಕ್ತಿ ಹೊಂದಿ ಮಾನಸಿಕ ನೆಮ್ಮದಿ ಸಿಗುತ್ತದೆ. ಉದರ ರೋಗ ನಿವಾರಣೆಯಾಗಿ ದೇಹದಲ್ಲಿರುವ 72 ಸಾವಿರ ನಾಡಿಗಳು ಪರಿಶುದ್ಧಗೊಳ್ಳುವ ಪ್ರಾಣಾಯಾಮಗಳು ಜೀವ ಸಂಜೀವಿನಿಗಳಾಗಿವೆ.

ಯೋಗಾಭ್ಯಾಸದಿಂದ ಆತ್ಮವಿಶ್ವಾಸ ಹೆಚ್ಚಾಗುತ್ತದೆ. ಆತ್ಮವಿಶ್ವಾಸವೊಂದಿದ್ದರೆ ಎಂತಹ ಖಾಯಿಲೆಯನ್ನೂ ಎದುರಿಸಬಹುದು. ಯೋಗ, ಪ್ರಾಣಾಯಾಮ ಮತ್ತು ಧ್ಯಾನ ಮಾಡುವುದರಿಂದ ಯಾವುದೇ ಕೆಲಸಕ್ಕೆ ಸನ್ನದ್ಧರಾಗಿ 'ಎಲ್ಲವೂ ನನ್ನಿಂದ ಸಾಧ್ಯ, ನಾನು ಮಾಡಬಲ್ಲೆ' ಎಂಬ ಆತ್ಮಸ್ಥೈರ್ಯ, ಆತ್ಮವಿಶ್ವಾಸ ಮೂಡುತ್ತದೆ.

ಯೋಗದಿಂದ ಬುದ್ಧಿ ಚುರುಕುಗೊಂಡು ದೇಹ ಬಲಿಷ್ಠವಾಗುವುದು ಮತ್ತು ಭಯ, ದುಗುಡ ದೂರವಾಗುತ್ತದೆ. ಓಂಕಾರ, ಭ್ರಾಮರಿ, ಕೆಲವು ಪ್ರಾಣಾಯಾಮಗಳು ಮತ್ತು ಧ್ಯಾನ ಮಾಡುವುದರಿಂದ ಏಕಾಗ್ರತೆ ಹೆಚ್ಚಾಗಿ ನೆನಪಿನ ಶಕ್ತಿ ವೃದ್ಧಿಸುತ್ತದೆ. ಚಂಚಲತೆ ನಿವಾರಣೆಯಾಗುತ್ತದೆ.

ಬೆಳಿಗ್ಗೆ ಸೂರ್ಯೋದಯಕ್ಕೆ ಮುಂಚೆ ಎದ್ದು ಯೋಗದ ಮೂಲಕ ನಮ್ಮ ದಿನಚರಿ ಪ್ರಾರಂಭವಾಗಬೇಕು. ಸದಾ ಚಟುವಟಿಕೆ ಮತ್ತು ಕ್ರಿಯಾಶೀಲತೆಯಿಂದ ಸೂರ್ಯ ನಮಸ್ಕಾರ, ಓಂಕಾರ ಜಪಿಸುವುದು ಇತ್ಯಾದಿ ದೈಹಿಕ ಚಟುವಟಿಕೆ ಮಾಡುವುದರಿಂದ ಶರೀರದಲ್ಲಿರುವ ವಿಷ ಹೊರ ಹಾಕುವುದು. ದೇಹದಲ್ಲಿ ರಕ್ತ ಸಂಚಾರ ಚೆನ್ನಾಗಿ ಆಗಿ ಪಚನಕ್ರಿಯೆ ಉತ್ತಮಗೊಳ್ಳುವುದು. ನಮ್ಮ ನಿಜ ವೈರಿಗಳೆಂದರೆ ಉಪ್ಪು, ಎಣ್ಣೆ, ಮಸಾಲೆ, ಸಕ್ಕರೆ. ಇವುಗಳನ್ನು ಸಾಧ್ಯವಾದಷ್ಟು ಕಡಿಮೆ ಬಳಸುವುದರಿಂದ ಆರೋಗ್ಯವನ್ನು ಸುಸ್ಥಿಯಲ್ಲಿಡಬಹುದು. ಸೊಪ್ಪು, ತರಕಾರಿ, ಕಾಳು, ಹಣ್ಣುಗಳನ್ನು ಮತ್ತು ಸಾವಯವ ಆಹಾರಗಳನ್ನು ಯಥೇಚ್ಛವಾಗಿ ಬಳಸಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಇಂದು ಎಲ್ಲಾ ಖಾಯಿಲೆಗಳಿಗೆ ಯೋಗ ರಾಮಬಾಣವಾಗಿದೆ. ಯೋಗ ಸ್ವಸ್ಥ ಸಮಾಜ ನಿರ್ಮಾಣಕ್ಕಾಗಿ ಅತ್ಯವಶ್ಯಕವಾಗಿದೆ. ನಿತ್ಯ ಒಂದು ತಾಸು ನಮಗಾಗಿ, ನಮ್ಮ ಆರೋಗ್ಯಕ್ಕಾಗಿ ಯೋಗ ಮಾಡಿದರೆ ಆರೋಗ್ಯ ಸಂಪತ್ತು ನಮ್ಮದಾಗುತ್ತದೆ.



**–ಹೆಚ್. ಮಲ್ಲಿಕಾರ್ಜುನ,**
ಕನ್ನಡ ಉಪನ್ಯಾಸಕರು,
ಹರಪನಹಳ್ಳಿ.

# ಉಚಿತ ಮೋತಿ ಬಿಂದು ಶಸ್ತ್ರ ಚಿಕಿತ್ಸೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹುಲಕೋಟಿ ಹಾಗೂ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗದಲ್ಲಿ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರದಿಂದ, ಎಚ್.ಕೆ. ಪಾಟೀಲ ಸೇವಾ ತಂಡದ ಸಹಾಯದಿಂದ ಸೋಮವಾರ ಒಟ್ಟು 22 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ನೆರವೇರಿಸಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ಮಾಡಿದರು. ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ವೈದ್ಯರು ನಡೆಸಿದರು.

ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡು ಸಹಾಯ-ಸಹಕಾರ ನೀಡಿ ಶಿಬಿರದ ಯಶಸ್ಸಿಗೆ ಶ್ರಮಿಸಿದರು.

## 'ಭವ್ಯ-ಭವಿಷ್ಯದ ನಾಳೆಗೆ-ಬನ್ನಿ; ಬನ್ನಿ ಶಾಲೆಗೆ ಚಿಣ್ಣರೇ' ಕಾರ್ಯಕ್ರಮ

# ಮಕ್ಕಳು ಶಿಕ್ಷಣದಿಂದ ವಂಚಿತರಾಗದಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನಾವೆಲ್ಲರೂ ಪ್ರಯತ್ನಿಸಬೇಕು. ಪ್ರತಿದಿನ ಮಗು ಶಾಲೆಗೆ ಬರುವಂತೆ ಮಾಡುವ ಜವಾಬ್ದಾರಿ ಶಿಕ್ಷಕರೊಂದಿಗೆ ಪಾಲಕರದ್ದೂ ಆಗಿದೆ. ಶಿಕ್ಷಣವು ಮಗುವಿನ ಹಕ್ಕಾಗಿದ್ದು, ಅದನ್ನು ಮಗುವಿಗೆ ಒದಗಿಸಲು ಮುಂದಾಗೋಣ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಸೋಮವಾರ ಗದುಗಿನ ಸರ್ಕಾರಿ ಶಾಲೆ ನಂ.11ರಲ್ಲಿ ನಡೆದ 'ಭವ್ಯ ಭವಿಷ್ಯದ ನಾಳೆಗೆ-ಬನ್ನಿ; ಬನ್ನಿ ಶಾಲೆಗೆ ಚಿಣ್ಣರೇ' ಕಾರ್ಯಕ್ರಮದಡಿಯಲ್ಲಿ ಅನಿಯಮಿತವಾಗಿ ಶಾಲೆಗೆ ಬರುತ್ತಿರುವ ಮಕ್ಕಳ ಮನೆ ಭೇಟಿ, ಪಾಲಕರಿಗೆ ತಿಳುವಳಿಕೆ ಕಾರ್ಯದಲ್ಲಿ ಭಾಗವಹಿಸಿ ಮಾತನಾಡಿದರು.



ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ ಹಲವಾರು ಉಚಿತ ಯೋಜನೆಗಳನ್ನು ಜಾರಿಗೊಳಿಸಿದ್ದು, ಶಿಷ್ಯವೇತನಗಳಂತಹ ಅನಕೂಲಗಳನ್ನು ಒದಗಿಸಿದೆ. ಅವುಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಪಾಲಕರು ಮಕ್ಕಳನ್ನು ಪ್ರತಿದಿನ ಶಾಲೆಗೆ ಕಳುಹಿಸಿ ಅವರ ಶೈಕ್ಷಣಿಕ ಪ್ರಗತಿಗೆ ನಮ್ಮೊಂಗಿಗೆ ಕೈಜೋಡಿಸಬೇಕು ಎಂದರು.

ಶಿಕ್ಷಣ ಸಂಯೋಜಕ ಮುರಳಿ ಸೊಲ್ಲಾಪೂರ ಮಾತನಾಡಿ, ಮಕ್ಕಳು ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಲು ಶಿಕ್ಷಣ ಅವಶ್ಯವಾಗಿದ್ದು, ಶಿಕ್ಷಣವು ಜೀವನವನ್ನು ಬೆಳಕಾಗಿಸಬಲ್ಲದೆಂಬುದನ್ನು ಪಾಲಕರು ಅರಿತು ಮಕ್ಕಳಿಗೆ ತಿಳಿಹೇಳಿ ಶಾಲೆಯತ್ತ ಮಕ್ಕಳ ಚಿತ್ತವನ್ನು ತಿರುಗಿಸಬೇಕು ಎಂದರು.

ಸರ್ಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ.1ರ ಮುಖ್ಯೋಪಾಧ್ಯಾಯೆ ಎಸ್.ಎಸ್. ಬಿರಾದಾರ ಹಾಗೂ ಎಚ್.ಎಲ್. ಆಸಂಗಿ, ಕನ್ನಡ ಗಂಡು ಮಕ್ಕಳ ಶಾಲೆ ನಂ.1ರ ಸಹ ಶಿಕ್ಷಕರಾದ ವಿಜಯಲಕ್ಷ್ಮೀ ಕುಂಟೋಜಿ ಎಫ್.ಎಸ್. ಹಿರೇಮಠ, ಸರ್ಕಾರಿ ಶಾಲೆ ನಂ.11ರ ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ ಹಾಗೂ ರೇಣುಕಾ ಹೊಸಮನಿ, ಮಂಜುಳಾ ಕೊಳ್ಳಿಯವರ ಪಾಲ್ಗೊಂಡು ಅನಿಯಮಿತ ಶಾಲೆ ಬಿಟ್ಟ ಮಕ್ಕಳ ಮನೆಗೆ ಭೇಟಿ ನೀಡಿ ಮಕ್ಕಳನ್ನು ಪ್ರತಿನಿತ್ಯ ಶಾಲೆಗೆ ಕಳುಹಿಸುವಂತೆ ತಿಳಿಸಿದರು.

ರೂಪವ್ವ ಕಣವಿ, ಸೈನಾಜ ನದಾಫ್, ಲಕ್ಷ್ಮೀಬಾಯಿ ಕುಂತಿ, ಆಯೀಶಾ ಪಟೇಲ, ಹಮೀದಾಬಾನು ನದಾಫ್, ಚೆನ್ನಮ್ಮ ಸಂದಿಮನಿ, ಗೀತಾ ಗೌಡರ, ಅನಸೂಯಾ ಕವಲೂರ ಸೇರಿದಂತೆ ಪಾಲಕರು, ಎಸ್.ಡಿ.ಎಂ.ಸಿ ಸದಸ್ಯರು ಪಾಲ್ಗೊಂಡಿದ್ದರು.

# ವಾರ್ಷಿಕ ಸರ್ವ ಸಾಧಾರಣ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಶ್ರೀ ಸೋ.ಸ. ಕ್ಷತ್ರಿಯ ತರುಣ ಸಂಘದ ಶ್ರೀ ಜಗದಂಬಾ ದೇವಸ್ಥಾನ ಇದರ ವಾರ್ಷಿಕ ಸರ್ವ ಸಾಧಾರಣ ಸಭೆಯು ಜೂನ್ 22ರಂದು ಮುಂಜಾನೆ 11 ಗಂಟೆಗೆ ಅಂಬಾಭವಾನಿ ದೇವಸ್ಥಾನದಲ್ಲಿ ಅಧ್ಯಕ್ಷರಾದ ಶ್ರೀಕಾಂತಸಾ ಬಿ.ರಾಯಬಾಗಿ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ.

ಈ ಸಭೆಗೆ ಸಮಾಜ ಬಾಂಧವರು, ತರುಣ ಸಂಘದ ಎಲ್ಲ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಸಮಯಕ್ಕೆ ಸರಿಯಾಗಿ ಭಾಗವಹಿಸಬೇಕು. ಸಭೆಯಲ್ಲಿ 2024-25ನೇ ಸಾಲಿನ ಲೆಕ್ಕ ಪತ್ರಗಳ ಪರಿಶೀಲನೆ ಹಾಗೂ ಮುಂದಿನ ಅವಧಿಗೆ ಪದಾಧಿಕಾರಿಗಳ ಆಯ್ಕೆ ಜರುಗಲಿದೆ ಎಂದು ಸಂಘದ ಗೌರವ ಕಾರ್ಯದರ್ಶಿ ರಾಜು ಜಿ.ಬಸವಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಶಿರಹಟ್ಟಿ ತಾಲೂಕಿನ ಛಬ್ಬಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲೆಗಳಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಭೇಟಿ ನೀಡಿ ಪರಿಶೀಲನೆ ನಡೆಸಿ, ಆಹಾರದ ಗುಣಮಟ್ಟ, ಆಹಾರ ಧಾನ್ಯಗಳ ಗುಣಮಟ್ಟ, ಬಿಸಿ ಊಟದ ಕೊಠಡಿ, ಬ್ಯಾಂಕ್ ಖಾತೆಗಳ ವಿವರ ಇತ್ಯಾದಿ ಪರಿಶೀಲನೆ ನಡೆಸಿದರು. ನಂತರ ಮಕ್ಕಳೊಂದಿಗೆ ಮಧ್ಯಾಹ್ನದ ಬಿಸಿಯೂಟ ಸೇವಿಸಿದರು.

### ಮಳೆ ಹಾನಿ, ಮುಂಜಾಗ್ರತಾ ಕ್ರಮಗಳ ಕುರಿತ ಅಧಿಕಾರಿಗಳ ಸಭೆಯಲ್ಲಿ ಶಾಸಕ ಅಬ್ಬಯ್ಯ ಪ್ರಸಾದ

# ವಾರ್ಡ್‌ವಾರು ಸ್ವಚ್ಛತೆಗೆ ಆದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಳೆಗಾಲದ ಸಮಯದಲ್ಲಿ ಅಧಿಕಾರಿಗಳು ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ರೀತಿಯ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕಾಗುತ್ತದೆ. ವಿವಿಧ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಣೆ ಮಾಡಬೇಕು ಎಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಅಬ್ಬಯ್ಯ ಪ್ರಸಾದ ಹೇಳಿದರು.

ಬುಧವಾರ ಸರ್ಕ್ಯೂಟ್ ಹೌಸ್‌ನಲ್ಲಿ ಹುಬ್ಬಳ್ಳಿ ಶಹರದಲ್ಲಿನ ಮಳೆ ಹಾನಿ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಅಪಾರ ಪ್ರಮಾಣದ ಮಳೆಯಾಗಿದೆ. ಹುಬ್ಬಳ್ಳಿಯಲ್ಲೂ ಸಹ ಹೆಚ್ಚು ಮಳೆಯಾಗಿದೆ. ಅಪಾರ ಪ್ರಮಾಣದ ಮಳೆಯಿಂದಾಗಿ ಸಾವಿರಾರು ಮನೆಗಳಿಗೆ ನೀರು ನುಗ್ಗಿದೆ. ಆ ನಿಟ್ಟಿನಲ್ಲಿ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಜನರಿಗೆ ಸರ್ಕಾರದಿಂದ ಪರಿಹಾರವನ್ನು ಒದಗಿಸುವ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು. ಭವಿಷ್ಯದ 10ರಿಂದ 15 ವರ್ಷದ ದೃಷ್ಟಿಕೋನವನ್ನು ಇಟ್ಟುಕೊಂಡು ಕಾಮಗಾರಿಗಳನ್ನು ಕೈಗೊಳ್ಳಬೇಕು. ಹಳೇ ಹುಬ್ಬಳ್ಳಿ ವೃತ್ತದ ರಸ್ತೆಯನ್ನು ದುರಸ್ತಿಗೊಳಿಸಬೇಕಾಗಿದೆ. ಸರ್ಕಾರದಿಂದ ಹೆಚ್ಚಿನ ಅನುದಾನ ತಂದರೂ ಸಹ ಯಾವುದೇ ರೀತಿಯ ಪ್ರಯೋಜನವಾಗುತ್ತಿಲ್ಲ. ಅಧಿಕಾರಿಗಳು ಹೆಚ್ಚಿನ ಮುತುವರ್ಜಿಯಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಉತ್ತಮ ಕೆಲಸಗಳಾಗುತ್ತವೆ ಎಂದರು.

ಅಧಿಕಾರಿಗಳು ತಮ್ಮ ವ್ಯಾಪ್ತಿಯ ಪ್ರದೇಶದಲ್ಲಿ ಮಳೆಯಿಂದ ಹಾನಿಯಾಗಿದೆಯೇ ಎಂಬುದನ್ನು ಗಮನಿಸಬೇಕು. ಚರಂಡಿಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ಯಾವುದೇ ರೀತಿಯಲ್ಲಿ ಕಲುಷಿತ ವಾತಾವರಣ ನಿರ್ಮಾಣವಾಗದಂತೆ ನೋಡಿಕೊಳ್ಳಬೇಕು. ಪಾಲಿಕೆಯ ಆರೋಗ್ಯ ನಿರೀಕ್ಷಕರು ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹುಬ್ಬಳ್ಳಿಯ ಉಣಕಲ್ ಕೆರೆಯಿಂದ ಗಬ್ಬೂರುವರೆಗೆ ಹರಿಯುವ ರಾಜ ಕಾಲುವೆಯನ್ನು ಸ್ವಚ್ಛ ಮಾಡಬೇಕು. ಜನರು ತ್ಯಾಜ್ಯವನ್ನು ಕಾಲುವೆಗೆ ಎಸೆಯದಂತೆ ಸೂಚನೆ ನೀಡಬೇಕು. ತ್ಯಾಜ್ಯದಿಂದಾಗಿ ರಾಜಕಾಲುವೆ ಹರಿಯುವ ಮಟ್ಟವನ್ನು ಬಿಟ್ಟು ಮನೆಗಳಿಗೆ ನೀರು ನುಗ್ಗುತ್ತದೆ. ರಾಜ ಕಾಲುವೆಯನ್ನು ಸ್ವಚ್ಛಗೊಳಿಸಿದ ಮಣ್ಣನ್ನು ಬೇರೆಡೆಗೆ ಸ್ಥಳಾಂತರಿಸಬೇಕಾಗುತ್ತದೆ. ಮಣ್ಣನ್ನು ಅಲ್ಲಿಯೇ ಬಿಟ್ಟರೆ ಮಳೆಯಾದಾಗ ಮರಳಿ ರಾಜಕಾಲುವೆಗೆ ಮಣ್ಣು ಸೇರುತ್ತದೆ. ಇದರಿಂದ ಸುಮಾರು 2 ಕೋಟಿಗೂ ಅಧಿಕ ಹಣ ವ್ಯರ್ಥವಾಗಲಿದೆ ಎಂದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ರುದ್ರೇಶ ಘಾಳಿ ಮಾತನಾಡಿ, ಸುಮಾರು 1188 ಮನೆಗಳಿಗೆ ಮಳೆ ನೀರು ನುಗ್ಗಿದೆ. 16 ಮನೆಗಳು ಬಿದ್ದು ಹೋಗಿವೆ. 3 ಮನೆಗಳಿಗೆ ಶೇ.50ರಷ್ಟು ಹಾನಿಯಾಗಿರುತ್ತವೆ. ರಾಜ ಕಾಲುವೆಯ ಸ್ವಚ್ಛತೆಗೆ ಗಮನ ಹರಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಪ್ರೊಬೇಷನರಿ ಅಧಿಕಾರಿ ರಿತಿಕಾ ವರ್ಮಾ, ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ, ಹುಬ್ಬಳ್ಳಿ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಚನ್ನಪ್ಪಗೌಡ್ರ, ಪಾಲಿಕೆಯ ಸಹಾಯಕ ಆಯುಕ್ತ ವಿಜಯಕುಮಾರ್, ಮಹಾನಗರ ಪಾಲಿಕೆಯ ಚಿಟಗುಪ್ಪಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಶ್ರೀಧರ ದಂಡಪ್ಪನವರ, ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧೀಕ್ಷಕ ಅಭಿಯಂತರ ಟಿ.ಪ್ರದೀಪ, ಲೋಕೋಪಯೋಗಿ ಇಲಾಖೆಯ ಎಇಇ ಎಚ್.ಜಿ. ಗುಂಡಳ್ಳಿ, ವಲಯ ಸಹಾಯಕ ಆಯುಕ್ತರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.



ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಮಾತನಾಡಿ, ಈಗಾಗಲೇ ಜಿಲ್ಲೆಯಾದ್ಯಂತ ಅಪಾರ ಪ್ರಮಾಣದ ಮಳೆಯಾಗಿದೆ. ಸಾಕಷ್ಟು ಹಾನಿಗಳೂ ಆಗಿದ್ದು, ಎಸ್‌ಡಿಆರ್‌ಎಫ್ ತಂಡ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ. ರಸ್ತೆಗಳ ದುರಸ್ತಿ ಬಗ್ಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹಾಗೂ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಬೇಸಿಗೆ ಅವಧಿಯಲ್ಲೇ ಚರಂಡಿ, ನಾಲಾಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿತ್ತು. ಆದರೆ ಚರಂಡಿಗಳನ್ನು ಸ್ವಚ್ಛಗೊಳಿಸದಿರುವುದು ಗಮನಕ್ಕೆ ಬಂದಿದೆ. ಸ್ವಚ್ಛತೆ ಕುರಿತಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಭಿಯಾನ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕು ಎಂದರು.

# 'ಯೋಗ' ರೋಗಿಯ ಪಾಲಿಗೆ ಸಂಜೀವಿನಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚಾರಣೆ ನಿಮಿತ್ತ ವಿದಾರ್ಥಿಗಳಿಗೆ ಯೋಗ ತರಬೇತಿಯನ್ನು ಆಯೋಜಿಸಲಾಗಿತ್ತು.

ಗದುಗಿನ ಯೋಗ ತರಬೇತುದಾರರು ಹಾಗೂ ನಿಸರ್ಗ ಚಿಕಿತ್ಸಾ ತಜ್ಞರಾದ ಡಾ. ಸತೀಶ ಹೊಂಬಾಳಿಯವರು ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ಮಾತನಾಡಿ, ಪ್ರತಿನಿತ್ಯ ಜನರು ಒಂದಿಲ್ಲೊಂದು ರೋಗಗಳಿಂದ ಬಳಲುತ್ತಿದ್ದಾರೆ. ವಿವಿಧ ಆಹಾರ ಪದ್ಧತಿಗಳಿಂದ ರೋಗ ಮುಕ್ತ ಜೀವನ ಸಾಧ್ಯವೇ ಇಲ್ಲ ಎಂಬ ಪ್ರಸ್ತುತ ದಿನಮಾನಗಳಲ್ಲಿ ಪ್ರತಿಯೊಬ್ಬರೂ ನಿಯಮಿತವಾಗಿ ಯೋಗ ಮಾಡುವುದನ್ನು ರೂಢಿಸಿಕೊಂಡರೆ ಶಾಂತಿಯುತ, ಆರೋಗ್ಯಯುತ ಜೀವನ ನಡೆಸಲು ಸಾಧ್ಯ. ಯೋಗ ರೋಗಿಯ ಪಾಲಿಗೆ ಸಂಜೀವಿನಿ ಇದ್ದಂತೆ ಎಂದರು.

ಪಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಆಹಾರ ಸೇವಿಸಿ ದಿನನಿತ್ಯ ಯೋಗ ಅಭ್ಯಾಸ ರೂಢಿಸಿಕೊಳ್ಳಿ. ಬದುಕಿನಲ್ಲಿ ಆರೋಗ್ಯವೇ ಬಹಳ ಮುಖ್ಯ. ಪರಿಸರ ಸಂರಕ್ಷಣೆ ಮಾಡಿ, ಕಾಡು ಬೆಳೆಸಿ, ನಾಡು ಉಳಿಸಿ. ಆರೋಗ್ಯಯುತವಾಗಿರಿ ಎಂದರು.

ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎಸ್.ಎಮ್. ಕುಡತರಕರ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಖಜಾಂಚಿ ಸಂಜಯ ಕುಡತರಕರ, ನಿರ್ದೇಶಕ ಚೇತನ ಕುಡತರಕರ, ಆಡಳಿತಾದಿಕಾರಿ ಕಿಶೋರ ಮುದಗಲ್ಲ, ಸಂಯೋಜಕರುಗಳಾದ ಪ್ರೊ. ಶಾಹೀದಾ ಶಿರಹಟ್ಟಿ, ಪ್ರೊ. ಅಲ್ವೀನಾ ಡಿ, ಪ್ರೊ. ಸವಿತಾ ಪೂಜಾರ, ಪ್ರೊ. ಚೈತ್ರಾ ಡಿ, ದೈಹಿಕ ನೀರ್ದೇಶಕರಾದ ಖಯುಮ ನವಲೂರ, ಉಮಾ ದಿನ್ನಿ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ರೋಟರಿ ಕ್ಲಬ್ ವೆಲ್‌ಫೇರ್ ಸೊಸೈಟಿ ವತಿಯಿಂದ 29 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆ

# ಸಂಸ್ಥೆಯ ಕಾರ್ಯ ಬಡವರಿಗೆ ವರದಾನ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಅಂಧತ್ವ ನಿವಾರಣಾ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಗದಗ ಇವರ ಸಹಯೋಗದೊಂದಿಗೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯಲ್ಲಿ (ಜಿಲ್ಲಾ ಸ್ಟೇಡಿಯಂ ಹತ್ತಿರ) ನೇತ್ರ ತಪಾಸಣೆ ಹಾಗೂ ಕಣ್ಣಿನಲ್ಲಿ ಮಸೂರ ಅಳವಡಿಸುವ ಈ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಏರ್ಪಡಿಸಲಾಗಿತ್ತು.

ಈ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಲಿಂ. ಮಹಾಂತಪ್ಪ ಬಸಪ್ಪ ಬಡ್ನಿ ಇವರ ಸ್ಮರಣಾರ್ಥ ಪುಷ್ಪಲತಾ ಮಹಾಂತಪ್ಪ ಬಡ್ನಿ ಹಾಗೂ ಮಕ್ಕಳು ಗದಗ ಹಾಗೂ ಡಾ. ಶಿವಪುತ್ರಯ್ಯಾ ನಾಲತ್ವಾಡಮಠ ಹಾಗೂ ಗಿರಿಜಾ ನಾಲತ್ವಾಡಮಠ ಗದಗ ವಹಿಸಿದ್ದರು. ಸುಮಾರು 65 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆ ಅವಶ್ಯವಿದ್ದ ಹಾಗೂ ಯೋಗ್ಯರಾದ 29 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯುನ್ನು ಕೈಗೊಳ್ಳಲಾಯಿತು.

ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷರಾದ ಶ್ರೀಧರ ಸುಲ್ತಾನಪೂರ ವಹಿಸಿ ಸಂಸ್ಥೆಯ ಕಾರ್ಯಕ್ರಮ ಕುರಿತು ಮಾಹಿತಿ ನೀಡಿದರು. ಲಿಂಗೈಕ್ಯ ಮಹಾಂತಪ್ಪ ಬಡ್ನಯವರ ಸಾಮಾಜಿಕ ಕಾರ್ಯಗಳನ್ನು ಸಂಸ್ಥೆಯ ಮಾಜಿ ಅಧ್ಯಕ್ಷರಾದ ಮಹಾಂತೇಶ ಬಾತಾಖಾನಿಯವರು ಸ್ಮರಿಸಿ ನುಡಿನಮನ ಸಲ್ಲಿಸಿದರು. ರೋಟರಿ ಸಂಸ್ಥೆಯ ಹಿರಿಯ ಸದಸ್ಯರಾದ ಡಾ. ಶಿವಪುತ್ರಯ್ಯಾ ನಾಲತ್ವಾಡಮಠ ಹಾಗೂ ಗಿರಿಜಾ ನಾಲತ್ವಾಡಮಠ, ಪುಷ್ಪಲತಾ ಬಡ್ನಿ ಹಾಗೂ ಮುರಗೇಶ ಬಡ್ನಿಯವರು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ನೇತ್ರ ಸಹಾಯಕರಾದ ರುದ್ರೇಶ ಶಸ್ತ್ರ ಚಿಕಿತ್ಸೆಗೆ ಒಳಗಾದ ರೋಗಿಗಳು ತಮ್ಮ ಕಣ್ಣಿನ ಆರೋಗ್ಯವನ್ನು ಯಾವ ರೀತಿ ಕಾಳಜಿವಹಿಸಬೇಕೆಂದು ತಿಳಿಸಿದರು. ರೋಟರಿ ಸಂಸ್ಥೆಯ ಅಧ್ಯಕ್ಷರಾದ ರೊ. ಆರ್.ಬಿ. ಉಪ್ಪಿನ ಸ್ವಾಗತಿಸಿದರು. ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಎಸ್. ಹೊಸಳ್ಳಿಮಠ ಕಾರ್ಯಕ್ರಮ ನಿರೂಪಿಸಿದರು. ಖಜಾಂಚಿ ರೊ. ಚನ್ನವೀರಪ್ಪ ಹುಣಶಿಕಟ್ಟಿ ವಂದಿಸಿದರು.

ರೋಟರಿ ಸಂಸ್ಥೆಯ ಸದಸ್ಯರಾದ, ರೊ. ಶ್ರೀಧರಗೌಡ ಧರ್ಮಾಯತ, ರೊ. ಮಹೇಶ ಹಿಂಡಿ, ರೊ. ಡಾ. ರಾಜೇಂದ್ರ ಗಚ್ಚಿನಮಠ, ರೊ. ಡಾ. ಪ್ರದೀಪ ಉಗಲಾಟ, ರೊ. ಡಾ. ಕಮಲಾಕ್ಷಿ ಅಂಗಡಿ, ರೊ. ಅಕ್ಷಯ ವ್ಹಿ.ಶೆಟ್ಟಿ, ರೊ. ವಿಶ್ವನಾಥ ಯಳಮಲಿ, ಡಾ. ವಿನಯ್ ಟಿಕಾರೆ, ಪ್ರತಿಭಾ ಬಡ್ನಿ ಮುಂತಾದವರು ಉಪಸ್ಥಿತರಿದ್ದರು. ಶಿಬಿರದಲ್ಲಿ ರುದ್ರೇಶ, ನೇತ್ರಾ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆ ನಡೆಸಲು ಸಹಕಾರ ನೀಡಿದರು.



ಕಾರ್ಯಕ್ರಮವನ್ನು ಉದ್ಘಾಟಿಸಿದ ಶ್ರೀಮದ್ ಘನಲಿಂಗ ಚಕ್ರವರ್ತಿ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ರೋಟರಿ ಸಂಸ್ಥೆಯು ಕೈಗೊಳ್ಳುತ್ತಿರುವ ನಿರಂತರ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವು ಬಡವರಿಗೆ ವರವಾಗಿದ್ದು ಅವರ ದೃಷ್ಟಿಯನ್ನು ಮರಳಿ ಪಡೆಯಲು ನೆರವಾಗಿದೆ. ದಾನಿಗಳಿಂದ ನಡೆಯುತ್ತಿರುವ ಈ ಸಂಸ್ಥೆಯು ಕಾರ್ಯ ಉತ್ತಮವಾಗಿದ್ದು ಪ್ರತಿಯೊಬ್ಬರೂ ಇಂತಹ ಸಂಸ್ಥೆಗೆ ಕೈಲಾದಷ್ಟು ದಾನ ನೀಡಬೇಕು ಎಂದರು.

# ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಅವಕಾಶ

▸▸ಮೊದಲನೇ ಪುಟದಿಂದ

ಇದರಲ್ಲಿ ವಿಶೇಷವಾಗಿ 9 ಕೌಟುಂಬಿಕ ಪ್ರಕರಣಗಳನ್ನು ಪುನಃ ಒಂದುಗೂಡಿಸಿ ಕಳುಹಿಸಲಾಗಿದೆ ಎಂದರು.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಜುಲೈ 12ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದರು.

# ಕೊಳಗೇರಿ ಪ್ರದೇಶಗಳನ್ನು ತೆರವುಗೊಳಿಸಿದರೆ ಉಗ್ರ ಹೋರಾಟ

▸▸ಮೊದಲನೇ ಪುಟದಿಂದ

ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮೆಹರುನಿಸಾ ಢಾಲಾಯತ, ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಮೆಹಬೂಬಸಾಬ ಬಳ್ಳಾರಿ, ಖಾಜಾಸಾಬ ಇಸ್ಮಾಯಿಲನವರ, ಮಲೇಶಪ್ಪ ಕಲಾಲ, ಮುನ್ನಾ ಅಗಡಿ, ಮೆಹರುನಿಸಾ ಡಂಬಳ, ಮೂಮುನ ಬೈರಕದಾರ, ಮಕ್ತುಮಸಾಬ ಮುಲ್ಲಾನವರ, ಮಂಜುನಾಥ ಶ್ರೀಗಿರಿ, ದಾದು ಗೋಸಾವಿ, ರವಿಕುಮಾರ ಗೋಸಾವಿ, ಸಾಕ್ರುಬಾಯಿ ಗೋಸಾವಿ, ಮಂಜುನಾಥ ಒಂಟಿಯಲಿ, ರೇಷ್ಮಾ ಢಾಲಾಯತ, ಶಂಕ್ರಪ್ಪ ಶಿರಹಟ್ಟಿ, ಗೌಸಸಾಬ ಅಕ್ಕಿ, ಸಲೀಂ ಹರಿಹರ ಹಾಗೂ ನಗರದ ವಿವಿಧ ಸ್ಲಂ ಪ್ರದೇಶದ ನೂರಾರು ಸ್ಲಂ ನಿವಾಸಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಸಂಬಂಧಿಸಿದಂತೆ ಅರ್ಹ 1 ರಿಂದ 8ನೇ ತರಗತಿ ವ್ಯಾಸಂಗ ಮಾಡುತ್ತಿರುವ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವರ್ಗದ ವಿದ್ಯಾರ್ಥಿಗಳಿಗೆ ಎಸ್.ಎಸ್.ಪಿ. ವಿದ್ಯಾರ್ಥಿ ವೇತನಕ್ಕಾಗಿ https://ssp.postmatric.karnataka.gov.in/ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಈ ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಆನ್ ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30.09.2025 ಆಗಿದೆ ಎಂದು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅವರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ: ಮಾಹಿತಿ ಕೇಂದ್ರ ಗದಗ- 9901132191, ಶಿರಹಟ್ಟಿ- 9591705863, ಮುಂಡರಗಿ-9916689778, ನರಗುಂದ-9901501170, ರೋಣ- 9964490088 ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕ ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಲು ಕೋರಿದೆ. ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

# ಪುಸ್ತಕಗಳ ಬಿಡುಗಡೆ ನಾಳೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಜೂನಗ 20ರ ಬೆಳಿಗ್ಗೆ 10 ಗಂಟೆಗೆ ಪುಸ್ತಕಗಳ ಬಿಡುಗಡೆ, 2024-2025ನೇ ಸಾಲಿನ ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭ ಹಾಗೂ ಅಂತಿಮ ವರ್ಷದ ಬಿಎ ಮತ್ತು ಬಿಕಾಂ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಪಟ್ಟಣ ಪಂಚಾಯಿತಿ ಅಧ್ಯಕ್ಷೆ ದೇವಕ್ಕ ಗುಡಿಮನಿ, ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕ ಪ್ರೊ. ಪ್ರಕಾಶ ಹೊಸಮನಿ, ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯದ ಭೂಗೋಳಶಾಸ್ತ್ರ ಮುಖ್ಯಸ್ಥ ಡಾ. ಎಲ್.ಟಿ. ನಾಯಕ ಭಾಗವಹಿಸಲಿದ್ದಾರೆಂದು ಕಾಲೇಜಿನ ಪ್ರಾಂಶುಪಾಲ ಡಾ. ಉಮೇಶ ಅರಹುಣಸಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ



■ವಿಜಯಸಾಕ್ಷಿ ಸುದ್ದಿ, ಗದಗ

ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಬಡವರಿಗೆ ಅನುಕೂಲಕರವಾಗಿದ್ದು, ಆರ್ಥಿಕ ಹೊರೆಯನ್ನು ಕಡಿಮೆ ಮಾಡುತ್ತವೆ ಎಂದು ಕಪ್ಪತ್ತಗುಡ್ಡ ನಂದಿವೇರಿಮಠದ ಶ್ರೀ ಶಿವಕುಮಾರ ಸ್ವಾಮಿಗಳು ಹೇಳಿದರು.

ಅವರು ಪಂಚಾಕ್ಷರಿ ಗವಾಯಿಗಳ 81ನೇ ಮತ್ತು ಪಂಡಿತ ಪುಟ್ಟರಾಜ ಗವಾಯಿಗಳ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ನಿಮಿತ್ತ ವೀರೇಶ್ವರ ಪುಣ್ಯಾಶ್ರಮದ ಆವರಣದಲ್ಲಿ ಡಾ. ಅಜಯ ಮತ್ತು ಡಾ. ಕಾವ್ಯ ಬಸರಿಗಿಡದ ದಂಪತಿಗಳು ಏರ್ಪಡಿಸಿದ್ದ 16ನೇ ಉಚಿತ ಆರೋಗ್ಯ ತಪಾಸಣಾ ಶಿಬಿರದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಶಿಬಿರವನ್ನು ಉದ್ಘಾಟಿಸಿದ ವೀರೇಶ್ವರ ಪುಣ್ಯಾಶ್ರಮದ ಶ್ರೀ ಕಲ್ಲಯ್ಯಜ್ಜನವರು ಮಾತನಾಡಿ, ಡಾ. ಕಾವ್ಯ ಮತ್ತು ಡಾ. ಅಜಯ ಬಸರಿಗಿಡದ ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಪ್ರಶಂಸಿಸಿದರು.

ಅತಿಥಿಯಾಗಿ ಭಾಗವಹಿಸಿದ್ದ ಮಾಣಿಕೇಶ್ವರಿ ಆಶ್ರಮದ ಶಿವಶರಣೆ ನಂದೀಶ್ವರಿ ಅಮ್ಮನವರು ಆಶ್ರಮಕ್ಕೆ ಆಶ್ರಮ ನೀಡಿದ ಮಹಾದಾನಿ ವೀರಪ್ಪ ಬಸರಿಗಿಡದವರ ಮರಿಮೊಮ್ಮಗ ಡಾ. ಅಜಯ ಬಸರಿಗಿಡದರು ಹಮ್ಮಿಕೊಂಡ ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿಯಾಗಲೆಂದು ಶುಭ ಹಾರೈಸಿದರು.

ಡಾ. ಪ್ರಕಾಶ ಬಸರಿಗಿಡದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸಮಾರಂಭದಲ್ಲಿ ಹೇಮರಾಜಶಾಸ್ತ್ರಿ, ಜಿ. ರಮೇಶ ಆದೋನಿ, ಬಾಗಲಕೋಟೆಯ ವಿದ್ಯಾವರ್ಧಕ ಸಂಘದ ಮೆಡಿಕಲ್ ಕಾಲೇಜಿನ ಚೇರಮನ್ ಅಶೋಕ ಸಜ್ಜನ ಬೇವೂರ ಉಪಸ್ಥಿತರಿದ್ದರು. ಡಾ. ಕಾವ್ಯ ಮತ್ತು ಡಾ. ಅಜಯ ಬಸರಿಗಿಡದ ನೂರಕ್ಕೂ ಹೆಚ್ಚು ರೋಗಿಗಳನ್ನು ತಪಾಸಿಸಿ ಉಚಿತ ಔಷಧಿ ವಿತರಣೆ ಮಾಡಿದರು.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ರಾಜೀವಗಾಂಧಿ ವಿಶ್ವ ವಿದ್ಯಾಲಯದ ಕೋರ್ಸ್ ಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.



ಪಕ್ಷದ ಸಂಘಟನಾ ಪರ್ವದ ಸಮಯದಲ್ಲಿ ಚುನಾವಣೆ ಮೂಲಕ ಬಿಜೆಪಿ ಜಿಲ್ಲಾ ಅಧ್ಯಕ್ಷರಾಗಿ ಆಯ್ಕೆಯಾಗಿದ್ದ ತೋಟಪ್ಪ (ರಾಜು) ಕುರಡಗಿ ಅವರಿಗೆ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಯಡಿಯೂರಪ್ಪ ಅವರು ಆದೇಶ ಪ್ರತಿ ನೀಡಿದರು. ಬೆಂಗಳೂರು ಜಗನಾಥ ಭವನದಲ್ಲಿ ಬುಧವಾರ ನಡೆದ ರಾಜ್ಯದ ನೂತನ ಜಿಲ್ಲಾಧ್ಯಕ್ಷರ ಅಭಿನಂದನಾ ಸಮಾರಂಭದಲ್ಲಿ ಎಲ್ಲಾ ಜಿಲ್ಲಾಧ್ಯಕ್ಷರಿಗೆ ಆದೇಶ ಪ್ರತಿ ನೀಡಲಾಯಿತು.

# ನಿಧನ

## ರುದ್ರಪ್ಪ ವಡ್ಡರ



**ಲಕ್ಕುಂಡಿ:** ಇಲ್ಲಿಯ ಗೌರಿ ಓಣಿಯ ನಿವಾಸಿ ರುದ್ರಪ್ಪ ಮರಿಯಪ್ಪ ವಡ್ಡರ (75) ಬುಧವಾರ ನಿಧನರಾದರು.

ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಇದ್ದಾರೆ.

ವಿವಿಧ ಸಂಘಟನೆಗಳ ಸಹಭಾಗಿತ್ವದಲ್ಲಿ ಜುಲೈ 5 ರಿಂದ ರಾಜ್ಯಾದ್ಯಂತ ಹೋರಾಟ: ಬೇಕ್ರಿ ರಮೇಶ್

# ಕನ್ನಡಿಗರ ಬಗೆಗಿನ ನಿರ್ಲಕ್ಷ್ಯ ಸಹಿಸಲಾಗದು

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದ ಅಸ್ಮಿತೆಯ ಉಳಿವಿಗಾಗಿ ಎಷ್ಟೇ ಹೋರಾಟ ಮಾಡಿದರೂ ಪ್ರಯೋಜನವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಕದಂಬ ಕನ್ನಡ ಸೈನ್ಯ, ಕಿಸಾನ್ ಸಂಘ, ಕ.ದ.ಸಂ ಕೃಷ್ಣಪ್ಪ ಸಂಘ ಸೇರಿದಂತೆ ಐದು ಸಂಘಟನೆಗಳ ಜೊತೆ-ಗೂಡಿ ವಿಭಿನ್ನ ಚಳುವಳಿ ಮೂಲಕ ಹೋರಾಟ ಮಾಡಲು ತಿರ್ಮಾನಿಸಲಾಗಿದೆ. ಈ ಹೋರಾಟಕ್ಕೆ ಸಾಹಿತಿಗಳು ಬೆಂಬಲ ನೀಡಲಿದ್ದಾರೆ. ಜುಲೈ 5ರಂದು ಮಂಡ್ಯ ಜಿಲ್ಲೆಯಿಂದ ಪ್ರಾರಂಭಿಸಿ ಮೈಸೂರು, ಚಾಮರಾಜ ನಗರ, ಹಾವೇರಿಯಲ್ಲಿ ಮೊದಲ ಸುತ್ತಿನ ಹೋರಾಟ ಆರಂಭಿಸಿ, ನಂತರ ರಾಜ್ಯಾದ್ಯಂತ ಹೋರಾಟ ಮಾಡಲು ತೀರ್ಮಾನಿಸಲಾಗಿದೆ




ಎಂದು ಕದಂಬ ಸೇನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ್ ಹೇಳಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಿರಭಿಮಾನಿ ಕನ್ನಡಿಗರು, ರಾಜಕಾರಣಿಗಳು, ಸಾಹಿತಿಗಳು, ಕಲಾವಿದರು, ನಟ-ನಟಿಯರು, ಉನ್ನತ ಅಧಿಕಾರಿಗಳು, ನೌಕರರು, ಆಡಳಿತ ಪಕ್ಷ, ವಿರೋಧ ಪಕ್ಷಗಳು ಸೇರಿದಂತೆ ಎಲ್ಲರೂ ಕನ್ನಡ, ಕನ್ನಡಿಗರ ಶತ್ರುಗಳಾಗಿದ್ದಾರೆ. ಅವರೆಲ್ಲರನ್ನು ಸ್ವಾಭಿಮಾನಿಗಳನ್ನಾಗಿ ಎಚ್ಚರಿಸಲು ರಾಜ್ಯಾದ್ಯಂತ ಈ ಹೋರಾಟ ಹಮ್ಮಿಕೊಳ್ಳಲಾಗಿದೆ.

ನಮ್ಮ ವಿದ್ಯಾವಂತ ಕನ್ನಡಿಗರ ಭಾಷಾ ನಿರಭಿಮಾನ ಹಾಗೂ ಸರ್ಕಾರ ಹಾಗೂ ವಿರೋಧ ಪಕ್ಷಗಳನ್ನು ಎಚ್ಚರಿಸುವ ಅವಶ್ಯಕತೆ ಇದೆ. ಕನ್ನಡ ಮತ್ತು ಕನ್ನಡಿಗರ ಬಗ್ಗೆ ತೋರುತ್ತಿರುವ ನಿರ್ಲಕ್ಷ್ಯ ಧೋರಣೆ ಸಹಿಸಿಸಲಾಗದು. ಅವರ್ಣನೀಯ ಕನ್ನಡ ನಾಡು ಜಾತಿ, ಮತ, ಧರ್ಮ, ರಾಜ್ಯ, ಪ್ರದೇಶ ಎಂದು ಯಾವುದೇ ಭೇದ-ಭಾವ ಮಾಡದೆ ಪರಭಾಷಿಕರಿಗೆ ಕನ್ನಡ ನಾಡು ಅವಕಾಶಗಳನ್ನು ಒದಗಿಸುತ್ತಾ ಬರುತ್ತಿರುವುದು ದುರ್ದೈವದ ಸಂಗತಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕನ್ನಡಿಗರ ರಕ್ಷಣೆಗಾಗಿ ಮುಂಚೂಣಿ ಪಾತ್ರ ವಹಿಸಬೇಕಾಗಿದ್ದ ಸಾಹಿತ್ಯ ಪರಿಷತ್ ಸ್ವ-ಹಿತಾಸಕ್ತಿಯಿಂದ ನಡೆದುಕೊಳ್ಳುತ್ತಿದೆ ಎಂಬ ಆರೋಪವಿದೆ. ಕನ್ನಡ ನಾಡು-ನುಡಿ, ನೆಲ-ಜಲ, ಕನ್ನಡಿಗರ ಸಂರಕ್ಷಣೆ, ಉದ್ಯೋಗಕ್ಕಾಗಿ ಹಿಂದಿ ಹೇರಿಕೆ ಬಗ್ಗೆ ಯಾರೂ ಧ್ವನಿ ಎತ್ತುತ್ತಿಲ್ಲ. ಪರಿಷತ್ತು ಕೇವಲ ಸಮ್ಮೇಳನದ ರಾಜನಾಗಿ ಮೆರೆಯುತ್ತಿದೆ. ಇಂತಹ ನಾಡದ್ರೋಹಿ ಪರಿಷತ್ತಿಗೆ ಸರ್ಕಾರ ಮೊದಲು ಅನುದಾನ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕದಲ್ಲಿ ಸರ್ಕಾರಿ ಶಾಲೆಗಳು ಚಿಂತಾಜನಕ ಸ್ಥಿತಿಯಲ್ಲಿದ್ದು, ಇದುವರೆಗೆ 6 ಸಾವಿರ ಶಾಲೆಗಳನ್ನು ಮುಚ್ಚಲಾಗಿದೆ. ಸಾವಿರಾರು ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಇಳಿಕೆಯಾಗಿದೆ. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿಲ್ಲ ಎಂಬ ಆರೋಪವಿದೆ. ಹಣ ಎಷ್ಟಾದರೂ ಸರಿ ಸಾಲ-ಸೋಲ ಮಾಡಿ ಮಕ್ಕಳನ್ನು ಖಾಸಗಿ ಶಾಲೆಗಳಲ್ಲಿ ಓದಿಸುತ್ತಿದ್ದಾರೆ. ಇದಕ್ಕೆ ಸಂಪೂರ್ಣವಾಗಿ ಸರ್ಕಾರವೇ ಹೊಣೆ. ಏಕೆಂದರೆ ಖಾಸಗಿ ಶಿಕ್ಷಣ ಸಂಸ್ಥೆಗಳು ಶೇ. 80ರಷ್ಟು ಮಂತ್ರಿಗಳು, ಶಾಸಕರು, ಸಂಸದರ ಒಡೆತನದಲ್ಲಿವೆ. ಮುಂದೆ ಬಡವರು, ರೈತರು, ಕಾರ್ಮಿಕರ ಮಕ್ಕಳ ಪಾಲಿಗೆ ಶಿಕ್ಷಣ ಮರಿಚೀಕೆಯಾಗುತ್ತದೆ ಎಂದು ರಾಜಕಾರಣಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

> ಹುಬ್ಬಳ್ಳಿ ರೈಲ್ವೆ ನಿಲ್ದಾಣಕ್ಕೆ ಶ್ರೀ ಸಿದ್ಧಾರೂಢರ ಹೆಸರು, ತುಮಕೂರಿನ ರೈಲ್ವೆ ನಿಲ್ದಾಣಕ್ಕೆ ಸಿದ್ಧಗಂಗಾ ಶ್ರೀಗಳ ಹೆಸರನ್ನು ನಾಮಕರಣ ಮಾಡಲಾಗಿದೆ. ಅದೇ ರೀತಿ ಅಂಧ-ಅನಾಥರ ಬಾಳಿನ ಬೆಳಕಾಗಿರುವ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಹೆಸರನ್ನು ಗದುಗಿನ ರೈಲ್ವೆ ನಿಲ್ದಾಣಕ್ಕೆ ನಾಮಕರಣ ಮಾಡಬೇಕು. ಇಲ್ಲದಿದ್ದರೆ ವಿವಿಧ ಕನ್ನಡ ಪರ ಸಂಘಟನೆಗಳ ಜೊತೆಗೂಡಿ ಉಗ್ರ ಹೋರಾಟ ಮಾಡಲಾಗುವುದು.
>
> **– ಎಂ.ಪಿ. ಮುಳಗುಂದ.**
> ರಾಜ್ಯಾಧ್ಯಕ್ಷ, ಪಂ. ಪುಟ್ಟರಾಜ ಗವಾಯಿಗಳ ರೈತ ಸಂಘ.

> ಕಪ್ಪತ್ತಗುಡ್ಡ ಸಂರಕ್ಷಣೆಗಾಗಿ ಅನೇಕ ಹೋರಾಟಗಳು ನಡೆದಿವೆ. ಲಿಂ. ಜಗದ್ಗುರು ಶ್ರೀ ಸಿದ್ಧಲಿಂಗೇಶ್ವರ ಶ್ರೀಗಳು ಸೇರಿದಂತೆ ಅನೇಕರು ಕಪ್ಪತ್ತಗುಡ್ಡ ಉಳಿವಿಗಾಗಿ ಹೋರಟ ಮಾಡಿಕೊಂಡು ಬಂದಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಅದು ಅಳಿವಿನಂಚಿನಲ್ಲಿದೆ. ಕಪ್ಪತ್ತಗುಡ್ಡದ ಬಗ್ಗೆ ಕರ್ನಾಟಕದಲ್ಲಿರುವ ಮಕ್ಕಳಿಗೆ ತಿಳುವಳಿಕೆ ಬರುವ ಉದ್ದೇಶದಿಂದ ಪಠ್ಯಪುಸ್ತಕದಲ್ಲಿ ಪಾಠವನ್ನು ಅಳವಡಿಸಬೇಕು. ಇದರಿಂದಾಗಿ ಕಪ್ಪತ್ತಗುಡ್ಡದ ಮಹತ್ವ ಮತ್ತಷ್ಟು ಹೆಚ್ಚಾಗುತ್ತದೆ.
>
> **– ಗವಿಸಿದ್ದಯ್ಯ ಹಳ್ಳಿಕೇರಿಮಠ.**
> ಕಪ್ಪತ್ತಗುಡ್ಡ ಸಂರಕ್ಷಣಾ ಹೋರಾಟಗಾರ.

ಲಕ್ಷ್ಮೀನಾರಾಯಣ ಪತ್ತಿನ ಸೌಹಾರ್ದ ಸಹಕಾರಿ ಸಂಘದ ಪ್ರಥಮ ವಾರ್ಷಿಕೋತ್ಸ

## ಯುವಕರ ಕಾರ್ಯ ಶ್ಲಾಘನೀಯ




■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತಮ್ಮ ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಿಕೊಳ್ಳಲು ಯುವಕರು ಸಹಕಾರ ಸಂಘವನ್ನು ಸ್ಥಾಪಿಸಿ, ಕೇವಲ ಒಂದು ವರ್ಷದಲ್ಲಿ 1.5 ಕೋಟಿ ರೂಗಳಷ್ಟು ವ್ಯವಹಾರ ನಡೆಸಿ, ಉತ್ತಮ ರೀತಿಯಲ್ಲಿ ಮುನ್ನಡೆಸುತ್ತಿರುವುದು ಶ್ಲಾಘನೀಯ ಎಂದು ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಸ್ವಾಮೀಜಿ ಹೇಳಿದರು.

ಇಲ್ಲಿಯ ಲಕ್ಷ್ಮೀನಾರಾಯಣ ಪತ್ತಿನ ಸೌಹಾರ್ದ ಸಹಕಾರಿ ಸಂಘದ ಪ್ರಥಮ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಾಸ್‌ಬುಕ್ ನಮೂದು ಮಾಡುವ ಯಂತ್ರವನ್ನು ಉದ್ಘಾಟಿಸಿ ಶ್ರೀಗಳು ಮಾತನಾಡುತ್ತಿದ್ದರು.

ಇಂದು ದೇಶದಲ್ಲಿ ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಸರಕಾರ ಹಲವಾರು ಯೋಜನೆಗಳನ್ನು ಜಾರಿಗೆ ತರುತ್ತಿದೆ. ಆದರೆ ಕೆಲವು ಸೋಮಾರಿ ಯುವಕರು ಅವುಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿರುವುದು ಕಾಣುತ್ತದೆ. ಆದರೆ ಇಲ್ಲಿಯ ಸಮಾನ ಮನಸ್ಕ ಯುವ ಸ್ನೇಹ ಬಳಗವು ತಮ್ಮ ಜಾತಿ ಬೇಧವನ್ನು ಮರೆತು ಸಣ್ಣ ಬ್ಯಾಂಕಿನ ರೂಪದಲ್ಲಿ ಪತ್ತಿನ ಸೌಹಾರ್ದ ಸಹಕಾರಿ ಸಂಘವನ್ನು ಸ್ಥಾಪಿಸಿ ಕೆಲ ಯುವಕರಿಗೆ ಉದ್ಯೋಗವನ್ನೂ ನೀಡಿದ್ದು ಸ್ತುತ್ಯಾರ್ಹವಾಗಿದೆ. ಇದು ಹೀಗೆಯೇ ಮುಂದುವರೆದು ಇನ್ನೂ ಹಲವು ಶಾಖೆಗಳನ್ನು ತೆರೆಯುವಂತಾಗಲಿ ಎಂದು ಹಾರೈಸಿದರು.

ಸಂಘದ ಅಧ್ಯಕ್ಷ ಬಸವರಾಜ ಮುಳ್ಳಾಳ ಅಧ್ಯಕ್ಷತೆ ವಹಿಸಿದ್ದರು. ವೇದಮೂರ್ತಿ ಶಂಕ್ರಯ್ಯ ಹಿರೇಮಠ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಬಿ. ಕಲಕೇರಿ, ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಬಾವಿ, ಬಿ.ಜೆ.ಪಿ ಜಿಲ್ಲಾ ವಕ್ತಾರ ದತ್ತಾತ್ರೇಯ ಜೋಶಿ, ವೀರಯ್ಯ ಗಂಧದ, ಅಶೋಕ ಬೂದಿಹಾಳ, ಗ್ರಾ.ಪಂ ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ಶಿವಪ್ಪ ಬಳಿಗೇರ, ವಿರೂಪಾಕ್ಷಪ್ಪ ಬೆಟಗೇರಿ, ಕಳಕೇಶ ಟೆಂಗಿನಕಾಯಿ, ಮೃತ್ಯುಂಜಯ ನಡುವಿನಮಠ, ಬಸವರಾಜ ಕವಲೂರ, ವಿನಾಯಕ ಡಿಗ್ಗಾವಿ, ವೀರಣ್ಣ ಅರಹುಣಶಿ, ಉಪಸ್ಥಿತರಿದ್ದರು. ಪ್ರವೀಣ ಕಲಾಲ ಸ್ವಾಗತಿಸಿದರು. ವೀರಣ್ಣ ಮೂಡಲತೋಟ ನಿರೂಪಿಸಿದರು. ದೇವರಾಜ ಕಮ್ಮಾರ ವಂದಿಸಿದರು.

ಡಾ. ಬಸವರಾಜ ದಿಂಡೂರ ಅಭಿನಂದನಾ ಸಮಾರಂಭ ಜೂನ್ 22ಕ್ಕೆ

## ಸಮಾರಂಭವನ್ನು ಯಶಸ್ವಿಗೊಳಿಸೋಣ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವೀರಶೈವ ಪಂಚಮಸಾಲಿ ಸಮಾಜದ ನಿಕಟಪೂರ್ವ ರಾಜ್ಯಾಧ್ಯಕ್ಷ, ನರೇಗಲ್ಲದವರೇ ಆದ ಡಾ. ಬಸವರಾಜ ದಿಂಡೂರ ಅವರ ಅಭಿನಂದನಾ ಸಮಾರಂಭ ಇದೇ ಜೂ. 22ರಂದು ಕೊಪ್ಪಳದ ಮಧುಶ್ರೀ ಗಾರ್ಡನ್‌ನಲ್ಲಿ ಜರುಗಲಿದೆ ಎಂದು ಸಮಾಜದ ಮುಖಂಡ ಸೋಮಣ್ಣ ಧಾಣಗಲ್ಲ ಹೇಳಿದರು.

ಪಟ್ಟಣದಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಬಸವರಾಜ ದಿಂಡೂರರು ಸಮಾಜ ಸಂಘಟಕರು, ಉತ್ತಮ ವಾಗ್ಮಿ. ವೀರಶೈವ ಪಂಚಮಸಾಲಿ ಸಮಾಜದ ಅಭಿವೃದ್ಧಿಗಾಗಿ ಅನೇಕ ಮಹತ್ವದ ಕಾರ್ಯಗಳನ್ನು ಕೈಗೊಂಡ ವ್ಯಕ್ತಿಯ ಈ ಅಭಿನಂದನಾ ಸಮಾರಂಭವನ್ನು ಅವರ ಅನುಯಾಯಿಗಳ ಮತ್ತು ಹಿತೈಷಿಗಳ ಒತ್ತಾಸೆಯ ಮೇರೆಗೆ ಕೊಪ್ಪಳದಲ್ಲಿ ನಡೆಸಲು ನಿರ್ಧರಿಸಲಾಗಿದೆ ಎಂದು ಸೋಮಣ್ಣ ಹೇಳಿದರು.




ಸಮಾರಂಭವನ್ನು ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸಲಿದ್ದು, 'ಜೀವನೋತ್ಸಾಹ' ಅಭಿನಂದನಾ ಗ್ರಂಥವನ್ನು ಮಾಜಿ ಸಚಿವ ಡಾ. ಮುರುಗೇಶ ನಿರಾಣಿ ಲೋಕಾರ್ಪಣೆಗೊಳಿಸಲಿದ್ದಾರೆ. ಸಚಿವ ಶಿವರಾಜ ತಂಗಡಗಿ ಸಾಕ್ಷ್ಯಚಿತ್ರವನ್ನು ಲೋಕಾರ್ಪಣೆಗೊಳಿಸಲಿದ್ದು, ಸಚಿವ ಶಿವಾನಂದ ಪಾಟೀಲ ಕೃಷಿಗೋಷ್ಠಿಯುನ್ನು ಉದ್ಘಾಟಿಸಲಿದ್ದಾರೆ. ಪಂಚಮಸಾಲಿ ಪೀಠದ ಪ್ರಧಾನ ಧರ್ಮದರ್ಶಿ ಬಿ.ಸಿ. ಉಮಾಪತಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಪಾವನ ಸಾನ್ನಿಧ್ಯವನ್ನು ಕೊಪ್ಪಳದ ಅಭಿನವ ಗವಿಸಿದ್ಧೇಶ್ವರ ಸ್ವಾಮಿಗಳು ವಹಿಸಲಿದ್ದು, ದಿವ್ಯ ಸಾನ್ನಿಧ್ಯವನ್ನು ಹರಿಹರ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾನಂದ ಸ್ವಾಮಿಗಳು, ಶಿರಹಟ್ಟಿಯ ಜಗದ್ಗುರು ಫಕೀರೇಶ್ವರ ಸಂಸ್ಥಾನಮಠದ ಜ. ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ವಹಿಸಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ನ್ಯಾಯವಾದಿ ವಿ.ಎ. ದಿಂಡೂರ, ವರ್ತಕ ಎಂ.ಎ. ದಿಂಡೂರ, ಶ್ರೀಶೈಲಪ್ಪ ಬಂಡಿಹಾಳ, ಎಂ.ವಿ. ವೀರಾಪೂರ, ಮುತ್ತಣ್ಣ ನೇಗಲಿ, ಸುರೇಶ ಹಳ್ಳಿಕೇರಿ, ಈಶ್ವರ ಬೆಟಗೇರಿ ಇನ್ನಿತರರಿದ್ದರು.

> ಮುತ್ತಣ್ಣ ಪಲ್ಲೇದ ಮಾತನಾಡಿ, ಜೂನ್ 22ಕ್ಕೆ ನಮ್ಮ ಸಮಾಜದ ಇಬ್ಬರು ಮಹತ್ವದ ವ್ಯಕ್ತಿಗಳ ಅಭಿನಂದನಾ ಸಮಾರಂಭವು ಎರಡು ಕಡೆಗಳಲ್ಲಿ ನಡೆಯುತ್ತಿರುವುದು ಸಮಾಜದ ಮುಖಂಡರಿಗೆಲ್ಲ ಸಂತಸ ತಂಬಿದೆ. ನರೇಗಲ್ಲದ ಪ್ರಸಿದ್ಧ ವೈದ್ಯರಾದ ಡಾ. ಕೆ.ಬಿ. ಧನ್ನೂರರ ಅಭಿನಂದನಾ ಸಮಾರಂಭವೂ ಅಂದೇ ರೋಣದಲ್ಲಿ ನಡೆಯಲಿದೆ ಎಂದರು.

## ನಿಷ್ಠಾವಂತ ಸಾಮಾನ್ಯ ಕಾರ್ಯಕರ್ತರಿಗೆ ಸ್ಥಾನ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಈ ಸಾರಿ ಗದಗ ಜಿಲ್ಲಾ ವಕ್ಫ್ ಅಧ್ಯಕ್ಷ ಸ್ಥಾನವನ್ನು ನಿಷ್ಠಾವಂತ ಸಾಮಾನ್ಯ ಕಾರ್ಯಕರ್ತರಿಗೆ ನೀಡಿ ಎಂದು ಕಾಂಗ್ರೆಸ್ ಮುಖಂಡ ಎಂ.ಡಿ. ಜಾಫರ್ ಡಾಲಾಯತ ವರಿಷ್ಠರಲ್ಲಿ ಮನವಿ ಮಾಡಿದ್ದಾರೆ.

ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತ ಸಾಮಾನ್ಯ ಕಾರ್ಯಕರ್ತರ ಸಂಖ್ಯೆ ಕಡಿಮೆ ಇಲ್ಲ. ಯಾವುದೇ ಆಸೆ-ಆಕಾಂಕ್ಷೆ ಇಲ್ಲದೆ ಕೇವಲ ಪಕ್ಷ ನಿಷ್ಠೆಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತಾ ಬಂದವರಿದ್ದಾರೆ. ವರಿಷ್ಠರ ಆಜ್ಞೆಗಳನ್ನು ಪಾಲಿಸುವರೇ ಸಾಮಾನ್ಯ ಕಾರ್ಯಕರ್ತರು.



ಅವರನ್ನು ಗುರುತಿಸಿ ಅವರಿಗೂ ಸ್ಥಾನವನ್ನು ನೀಡಿ ಹೆಚ್ಚಿನ ಸೇವೆ ಮಾಡಲು ಜಿಲ್ಲೆಯ ನಾಯಕರು ಅನುಕೂಲ ಮಾಡಿಕೊಡುಬೇಕು.

ಸಾಮಾನ್ಯ ಕಾರ್ಯಕರ್ತರು ಸಾಮಾನ್ಯ ಕಾರ್ಯಕರ್ತರಾಗಿಯೇ ಉಳಿದಿದ್ದಾರೆ. ಪಕ್ಷದಲ್ಲಿ ಯಾವುದೇ ಸ್ಥಾನಮಾನ ಇಲ್ಲದೆ ಕೇವಲ ಜೀತದ ಆಳುಗಳಂತೆ ಇವರನ್ನು ಇಡಲಾಗಿದೆ. ಚುನಾವಣೆ ಸಂದರ್ಭಗಳಲ್ಲಿ, ಬೀದಿಗಳಲ್ಲಿ ಹೋರಾಟ ಮಾಡುವ ಸಂದರ್ಭಗಳಲ್ಲಿ ಇವರನ್ನು ಉಪಯೋಗಿಸಿಕೊಳ್ಳಲಾಗುತ್ತದೆಯೇ ಹೊರತು ಯಾವುದೇ ಸ್ಥಾನಮಾನ ನೀಡಿಲ್ಲ. ಕಾಂಗ್ರೆಸ್ ಪಕ್ಷವು ಪ್ರಜಾಪ್ರಭುತ್ವದ ತಳಹದಿಯ ಮೇಲೆ ನಿಂತಿದೆ. ಅದನ್ನು ಕಾಪಾಡುವುದು ವರಿಷ್ಠರ ಮಹತ್ತರ ಜವಾಬ್ದಾರಿಯಾಗುತ್ತದೆ ಎಂದು ಅವರು ವರಿಷ್ಠರಲ್ಲಿ ಮನವಿ ಮಾಡಿಕೊಂಡಿದ್ದಾರೆ.

## ಮಕ್ಕಳು ಜವಾಬ್ದಾರಿಯಿಂದ ಬದುಕಬೇಕು



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಂದು ಆಧುನಿಕ ತಂತ್ರಜ್ಞಾನ ಬೆಳೆದಂತೆಲ್ಲಾ ಮಕ್ಕಳಲ್ಲಿ ಓದಿನ ಆಸಕ್ತಿ ಕುಂಠಿತಗೊಳ್ಳುತ್ತಿದ್ದು, ಇದರಿಂದ ಮೌಲ್ಯಯುತವಾದ ಶಿಕ್ಷಣ ಪಡೆಯಲು ಆಗದೆ ಮಕ್ಕಳ ಭಾವೀ ಭವಿಷ್ಯಕ್ಕೆ ತೊಂದರೆಯಾಗುತ್ತಿದೆ. ಮಕ್ಕಳು ಜವಾಬ್ದಾರಿಯಿಂದ ಬದುಕಿದಲ್ಲಿ ಸುಂದರ ಸಮಾಜ ಕಟ್ಟಲು ಸಾಧ್ಯವಾಗುತ್ತದೆ ಎಂದು ಶಿರಹಟ್ಟಿ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಬಿ.ಜಿ. ಗಿರಿತಿಮ್ಮಣ್ಣವರ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 2024/25ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್ ಹಾಗೂ ರೆಡ್ ಕ್ರಾಸ್ ಘಟಕಗಳ ಸಮಾರೋಪ ಸಮಾರಂಭದಲ್ಲಿ ಸಾಧಕ ವಿದ್ಯಾರ್ಥಿನಿಯರನ್ನು ಸನ್ಮಾನಿಸಿ ಮಾತನಾಡಿದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ವಹಿಸಿದ್ದರು. ಪ.ಪಂ ಸದಸ್ಯ ನಾಗರಾಜ ದೇಶಪಾಂಡೆ, ಎಸ್.ಸಿ. ಬಡ್ನಿ, ಅಶೋಕ ಸೋನಗೋಜಿ, ಸುಮನ ಚವಡಿ, ಶಿವಪ್ಪ ಮುದಿಯಜ್ಜನವರ, ಅನುಪಮಾ, ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿ ಇದ್ದರು.

## ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯ , ಮೈಸೂರು 570 006 ಇಲ್ಲಿ ಅರ್ಕಿಟೆಕ್ಚರ್ ಅಸಿಸ್ಟೆಂಟ್‌ಸಿಪ್ , ಕಮರ್ಷಿಯಲ್ ಪ್ರಾಕ್ಟಿಸ್ , ಕಂಪ್ಯೂಟರ್ ಸೈನ್ಸ್ ಮತ್ತು ಇಂಜನೀಯರಿಂಗ್ , ಜ್ಯುವೆಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನೀಯರಿಂಗ್ , ಕಂಪ್ಯೂಟರ್ ಅಪ್ಲಿಕೇಷನ್ ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜನೀಯರಿಂಗ್ ಮತ್ತು ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ ಈ ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕೆ ವಿಶೇಷಚೇತನ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನವನ್ನು ಜೂನ್ 23 ರ ವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ ತಿತಿತಿ.ಥಿಠಿಜಚಿ.ಠಡಿಂ / ಇಮೇಲ್ / ಮೊಬೈಲ್ ಸಂಖ್ಯೆ 98446 44937 ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಸಂಜೀವಿನಿ ಮಹಿಳಾ ಕಿಸಾನ್ ರೈತ ಉತ್ಪಾದಕ ಕಂಪನಿ ಲಿಮಿಟೆಡ್ ಅವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದಾರೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ್ 25 ಆಗಿದ್ದು, ಅರ್ಜಿಯನ್ನು ತಾಲೂಕು ಪಂಚಾಯಿತಿ ಸಿಜೆಎಮ್ ಪಿ + 325 ಸ್ಟೇಷನ್ ರಸ್ತೆ, , ಬಸವೇಶ್ವರ ನಗರ-ಗದಗ ಇಲ್ಲಿಗೆ ಸಲ್ಲಿಸಬೇಕು ಅಥವಾ ಖುದ್ದಾಗಿ ಕಚೇರಿಗೆ ಬಂದು ಅರ್ಜಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ. ದೂರವಾಣಿ ಸಂಖ್ಯೆ 08372 278352 ಇಲ್ಲಿ ಸಂಪರ್ಕಿಸಬಹುದಾಗಿದೆ.



ಸುಮಾರು ಎರಡು ವಾರಗಳ ಹಿಂದೆ ಗೋ ಕಳ್ಳಸಾಗಣೆ ಆರೋಪದಡಿ ಗೋ ರಕ್ಷಕರಿಂದ ಮಾರಣಾಂತಿಕವಾಗಿ ಹಲ್ಲೆಗೊಳಗಾಗಿದ್ದ ಜುನೈದ್ ಶಹಜಾದ್ (21) ಮಂಗಳವಾರ ಸಾವನ್ನಪ್ಪಿದ್ದಾನೆ. ಇದೇ ಸಂದರ್ಭದಲ್ಲಿ ಹಲ್ಲೆಗೊಳಗಾಗಿದ್ದ ಅರ್ಮಾನ್ ಕೂಡ ಭೋಪಾಲ್‌ನ ಹಮೀದಿಯಾ ಆಸ್ಪತ್ರೆಯಲ್ಲಿ ಜೀವನ್ಮರಣ ಹೋರಾಟ ನಡೆಸುತ್ತಿದ್ದಾನೆ.

## ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸೋಣ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂನ್ 27ರಂದು ನಾಡಪ್ರಭು ಶ್ರೀ ಕೆಂಪೇಗೌಡ ಮತ್ತು ಜುಲೈ 2ರಂದು ಡಾ. ಫ.ಗು. ಹಳಕಟ್ಟಿ ಅವರ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಹೇಳಿದರು.




ಅವರು ಬುಧವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ಪ್ರತಿವರ್ಷದಂತೆ ವಿಜೃಂಭಣೆಯಿಂದ ಆಚರಿಸೋಣ ಎಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾಜದ ಹಿರಿಯ ಮುಖಂಡರು ಹಾಗೂ ಸಾರ್ವಜನಿಕರು ಸಭೆಯಲ್ಲಿ ಉಪಸ್ಥಿತರಿದ್ದರು.

## ಜೂ.21ಕ್ಕೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದಲ್ಲಿ ಜೂನ್ 21ರಂದು ಬೆಳಿಗ್ಗೆ 6 ಗಂಟೆಗೆ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಪತಂಜಲಿ ಯೋಗ ಸಮಿತಿ ಹಾಗೂ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಜರುಗಲಿದೆ.

ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸುವರು. ಉದ್ಘಾಟಕರಾಗಿ ಪ.ಪಂ ಸದಸ್ಯ ಎಸ್.ಸಿ. ಬಡ್ನಿ ಆಗಮಿಸುವರು. ಮುಖ್ಯ ಅತಿಥಿಗಳಾಗಿ ಕೇಶವ ದೇವಾಂಗ್, ಸಂಗಮೇಶ ಶಿವಯೋಗಿ, ಡಾ. ಎಸ್.ಸಿ. ಚವಡಿ, ಎಂ.ಪಿ. ಗುಳೇದ, ವಿಜಯ ನೀಲಗುಂದ, ದ್ಯಾಮಣ್ಣ ನೀಲಗುಂದ, ಪುನೀತ ಓಲೇಕಾರ, ಬಸವರಾಜ ಹಾರೋಗೇರಿ, ಪರಶುರಾಮ ವಂಟಕರ, ಬಸವಂತಪ್ಪ ಮಟ್ಟಿ, ರವಿಕುಮಾರ, ಅನುಪ ಕೆಂಚನಗೌಡರ, ಮಂಗಳಾ ನೀಲಗುಂದ, ಹರ್ಷಲತಾ ದೇಶಪಾಂಡೆ, ಅಕ್ಕಮ್ಮಾ ನೀಲಗುಂದ, ಗೀತಾ ಜಾಧಾವ, ಶಾಂತಾ, ಶೋಭಾ ಪಾಟೀಲ, ನಾಗವೇಣಿ ನಾಯರ, ಮಧು ಕೋರಿ, ಕವಿತಾ ದೊಟಿಕಲ ಭಾಗವಹಿಸುವರು ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಪ್ರಕಟಣೆಗೆ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka